ತುಂಗಭದ್ರಾ ಜಲಾಶಯದಲ್ಲಿ ಸಂಗ್ರಹವಾಗಿರುವ ಹೂಳು ತೆಗೆಯಲು ಒತ್ತಾಯಿಸಿ ಈ ತಿಂಗಳ ಕೊನೆಯಲ್ಲಿ ತುಂಗಭದ್ರಾ ಹೂಳಿನ ಜಾತ್ರೆ ಹಮ್ಮಿಕೊಳ್ಳಲಾಗಿದೆ. ನೂರಕ್ಕೂ ಹೆಚ್ಚು ಟ್ರ್ಯಾಕ್ಟರ್, ರೈತರು ಚಳವಳಿಯಲ್ಲಿ ಭಾಗವಹಿಸಲಿದ್ದಾರೆ.

• **ದರೂರು ಪುರುಷೋತ್ತಮಗೌಡ** ತುಂಗಭದ್ರಾ ರೈತ ಸಂಘದ ಅಧ್ಯಕ್ಷ

ಸುದ್ದಿ ಸಿಂಚನ

ಚಿಕನ್ ಅಂಗಡಿಯಲ್ಲಿದ್ದ ಸಿಲಿಂಡರ್ ಸ್ಫೋಟ

ಕೂಡ್ಲಿಗಿ: ಪಟ್ಟಣದ ಜನಸಂದಣಿ ಪ್ರದೇಶದಲ್ಲಿರುವ ಚಿಕನ್ ಅಂಗಡಿಯೊಂದರಲ್ಲಿ ಗ್ಯಾಸ್ ಲೀಕ್ ಆಗಿ ಸಿಲಿಂಡರ್ ಸ್ಫೋಟಗೊಂಡ ಘಟನೆ ಗುರುವಾರ ನಡೆದಿದೆ. ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಾಪಾಯವಾಗಿಲ್ಲ.



ಪಟ್ಟಣದ ಹೆಸಾನುಲ್ಲಾ ಎಂಬಾತನಿಗೆ ಸೇರಿದ ಚಿಕನ್ ಅಂಗಡಿಯಲ್ಲಿ ಸಿಲಿಂಡರ್ ಸ್ಫೋಟಗೊಂಡಿದೆ. ಈ ವೇಳೆ ಅಂಗಡಿ ಮಾಲಕ ಅಂಗಡಿಯಿಂದ ಹೊರಬಂದು ಅಲ್ಲಿದ್ದ ಜನರನ್ನು ಚದುರಿಸಿದ್ದಾನೆ. ಸ್ಫೋಟದ ರಭಸಕ್ಕೆ ಶೆಡ್‌ನಲ್ಲಿನ ತಗಡುಗಳು ಸೀಳಿವೆ. ಘಟನೆಯಲ್ಲಿ 20 ಕೋಳಿಗಳು ಸತ್ತಿವೆ. ಗ್ಯಾಸ್‌ಗೆ ಅಳವಡಿಸಲಾಗಿದ್ದ ರೆಗ್ಯುಲೇಟರ್ ಸಿಡಿದು ಸುಮಾರು 300 ಮೀಟರ್‌ದೂರ ಬಿದ್ದಿದೆ. ಗ್ರೈಂಡರ್, ಫ್ಯಾನ್, 3 ಬ್ಯಾರೆಲ್, ವಿದ್ಯುತ್ ಬೋರ್ಡ್ ಬೆಂಕಿಗೆ ಆಹುತಿಯಾಗಿವೆ. ಅಂದಾಜು ₹2 ಲಕ್ಷ ಮೌಲ್ಯದ ವಸ್ತುಗಳು ನಷ್ಟವಾಗಿದೆ ಎನ್ನಲಾಗಿದೆ. ಸುದ್ದಿ ತಿಳಿದ ತಕ್ಷಣ ಕೂಡ್ಲಿಗಿ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ ಬೆಂಕಿ ನಂದಿಸಿದ್ದಾರೆ.

ಹೋಂ ಸ್ಟೇಗಳಿಗೆ ನೋಂದಣಿ ಕಡ್ಡಾಯ

ಹೊಸಪೇಟೆ: ಪ್ರವಾಸಿಗರ ಅನುಕೂಲಕ್ಕಾಗಿ ಹೋಂ ಸ್ಟೇ ಪ್ರಾರಂಭಿಸಲು ಪ್ರವಾಸೋದ್ಯಮ ಇಲಾಖೆಯಡಿ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ. ಆದರೆ ಜಿಲ್ಲೆಯ ವಿಶ್ವ ಪಾರಂಪರಿಕ ತಾಣವಾದ ಹಂಪಿ, ಕಮಲಾಪುರ ವ್ಯಾಪ್ತಿ, ಜಿಲ್ಲೆಯ ಇತರೆ ಸ್ಥಳಗಳಲ್ಲಿ ಪ್ರವಾಸೋದ್ಯಮ ಇಲಾಖೆಯಡಿ ನೋಂದಣಿ ಮಾಡಿಕೊಳ್ಳದೇ ಹಲವು ಹೋಂ ಸ್ಟೇ ಗಳು ಕಾರ್ಯ ನಿರ್ವಹಿಸುತ್ತಿರುವುದು ಗಮನಕ್ಕೆ ಬಂದಿದೆ. ಪ್ರವಾಸೋದ್ಯಮ ಇಲಾಖೆಯಿಂದ ಯಾವುದೇ ಅಧಿಕೃತ ಅನುಮೋದನೆ ಅಥವಾ ನೋಂದಣಿ ಮಾಡಿಕೊಳ್ಳದೇ ಇರುವ ಹೋಂ ಸ್ಟೇಗಳನ್ನು ಅನಧಿಕೃತ ಹೋಂ ಸ್ಟೇಗಳೆಂದು ಪರಿಗಣಿಸಲಾಗುತ್ತದೆ.ಹೋಂ ಸ್ಟೇ ಗಳನ್ನು ಕಾನೂನು ಬದ್ಧವಾಗಿ ಮುಂದುವರೆಸಲು ಆಸಕ್ತಿ ಇರುವ ಮಾಲೀಕರು ಅಗತ್ಯ ದಾಖಲೆಗಳೊಂದಿಗೆ ಕಮಲಾಪುರ ಉಪ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ, ಹೋಂ ಸ್ಟೇ ನೋಂದಣಿಗೆ ಅರ್ಜಿ ಸಲ್ಲಿಸಿ, ನೋಂದಣಿ ಪ್ರಮಾಣಪತ್ರ ಪಡೆಯಲು ತಿಳಿಸಿದೆ. ನೋಂದಣಿ ಪ್ರಮಾಣಪತ್ರ ಪಡೆಯದೇ ಕಾರ್ಯ ನಿರ್ವಹಿಸುತ್ತಿರುವ ಹೋಂಸ್ಟೇಗಳನ್ನು ಕೂಡಲೇ ಸ್ಥಗಿತಗೊಳಿಸಬೇಕು. ಅಕ್ರಮವಾಗಿ ಕೊಠಡಿ ನೀಡಿರುವುದು ಕಂಡುಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಹಂಪಿಯಲ್ಲಿ ಶೀಘ್ರ ತಲೆ ಎತ್ತಲಿದೆ ಅತ್ಯಾಧುನಿಕ ಸ್ಟ್ರೀಟ್ ಫುಡ್ ಹಬ್

ಒಂದೇ ಸೂರಿನಡಿ ತರಹೇವಾರಿ ಗುಣಮಟ್ಟದ ಆಹಾರ ಖಾದ್ಯಗಳನ್ನು ಒದಗಿಸುವ ಯೋಜನೆ

• **ಕನ್ನಡಪ್ರಭ ವಾರ್ತೆ** ಹೊಸಪೇಟೆ

ವಿಶ್ವವಿಖ್ಯಾತ ಪ್ರವಾಸಿ ತಾಣ ಹಂಪಿಯಲ್ಲಿ ಪ್ರವಾಸಿಗರಿಗೆ ಹಾಗೂ ಸ್ಥಳೀಯರಿಗೆ ಒಂದೇ ಸೂರಿನಡಿ ತರಹೇವಾರಿ ಗುಣಮಟ್ಟದ ಆಹಾರ ಖಾದ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಪಿಎಂ ಸ್ವನಿಧಿ ಯೋಜನೆಯಡಿ ಅತ್ಯಾಧುನಿಕ ಸ್ಟ್ರೀಟ್ ಫುಡ್ ಹಬ್ ಸ್ಥಾಪಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ನಡೆದ ಪಿಎಂ ಸ್ವನಿಧಿ ಯೋಜನೆಯಡಿ ಸ್ಟ್ರೀಟ್ ಫುಡ್ ಹಬ್ ಸ್ಥಾಪನೆಗೆ ಸಂಬಂಧಿಸಿದಂತೆ ಹಮ್ಮಿಕೊಳ್ಳಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಂಪಿಗೆ ಬರುವ ಸಾವಿರಾರು ದೇಶಿವಿದೇಶಿ ಪ್ರವಾಸಿಗರಿಗೆ ಒಂದೇ ಸೂರಿನಡಿ ಸ್ವಚ್ಛ ಹಾಗೂ ವೈವಿಧ್ಯಮಯ ಆಹಾರಗಳನ್ನು ಒದಗಿಸುವುದು ಈ ಫುಡ್ ಹಬ್‌ನ ಮುಖ್ಯ ಉದ್ದೇಶವಾಗಿದೆ. ಇದರಿಂದ ಸ್ಥಳೀಯ ಬೀದಿಬದಿ ವ್ಯಾಪಾರಿಗಳಿಗೂ ಆರ್ಥಿಕ ಸಬಲೀಕರಣಕ್ಕೆ ಅವಕಾಶ ಸಿಗಲಿದೆ. ಹಂಪಿಯ ಪ್ರವಾಸೋದ್ಯಮಕ್ಕೆ ಹೊಸ ಮೆರುಗು ಸಿಗಲಿದೆ.

ಕೇಂದ್ರ ಸರ್ಕಾರದ ಪಿಎಂ ಸ್ವನಿಧಿ ಯೋಜನೆಯಡಿ ಬೀದಿಬದಿ ವ್ಯಾಪಾರಿಗಳ ಉಪ ಘಟಕದಡಿ ಈ ಯೋಜನೆ ಹಮ್ಮಿಕೊಳ್ಳಲಾಗಿದೆ. ರಾಜ್ಯದಲ್ಲಿ ಚಾಮುಂಡಿ ಬೆಟ್ಟ, ಬೇಲೂರು- ಹಳೇಬೀಡು, ಗಾಣಗಾಪುರ, ಪಟ್ಟದಕಲ್ಲು ಹಾಗೂ ಹಂಪಿ ಸೇರಿ ಐದು ಪ್ರದೇಶಗಳಲ್ಲಿ ಸ್ಟ್ರೀಟ್ ಫುಡ್ ಹಬ್ ಸ್ಥಾಪಿಸಲು ನಿರ್ಧರಿಸಲಾಗಿದೆ. ಅದರಲ್ಲಿ ಹಂಪಿಯೂ ಸೇರಿದ್ದು, ಹೆಮ್ಮೆಯ ಸಂಗತಿ. ಈ ಸ್ಟ್ರೀಟ್ ಫುಡ್ ಹಬ್ ಸ್ಥಾಪಿಸಲು ಒಂದು ಕ್ಲಸ್ಟರ್‌ಗೆ ₹4 ಕೋಟಿ ವೆಚ್ಚದಲ್ಲಿ ತಾತ್ಕಾಲಿಕ ಮಳಿಗೆ ಸ್ಥಾಪಿಸಿ ವ್ಯಾಪಾರ ನಡೆಸಲು ಅನುಮತಿ ನೀಡಲಾಗುವುದು. ಈ ಯೋಜನೆಯ ಅನುಷ್ಠಾನಕ್ಕಾಗಿ ಹಂಪಿ ಗ್ರಾಪಂ, ಕಮಲಾಪುರ ಪುರಸಭೆ ಜಂಟಿಯಾಗಿ ಕಾರ್ಯ ನಿರ್ವಹಿಸಲಿವೆ.

ಈಗಾಗಲೇ ಈ ಯೋಜನೆಗಾಗಿ ಮಳಿಗೆ ಸ್ಥಾಪಿಸಲು 3 ಸ್ಥಳ ಗುರುತಿಸಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಪೈಕಿ ಈಗಾಗಲೇ ದೊಡ್ಡ ಆಲದಮರದ ಎದುರು ಹಾಗೂ ಹಂಪಿ ಪಾರ್ಕಿಂಗ್ ಸ್ಥಳದ ಹತ್ತಿರ ಗುತ್ತಿಲ್ಯಾಂಡ್ ಸೇರಿ ಎರಡು ಕಡೆ ಸ್ಥಳ ಗುರುತಿಸಲಾಗಿದೆ. ಭೂಮಿ ಮಂಜೂರಾತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ.

ಈ ನಿಟ್ಟಿನಲ್ಲಿ ಒಂದು ಸ್ಟ್ರೀಟ್ ಫುಡ್ ಹಬ್‌ನಲ್ಲಿ 50 ವ್ಯಾಪಾರಸ್ಥರಿಗೆ ಅವಕಾಶವಿದೆ. ದೇಶ ವಿದೇಶಗಳಿಂದ ಆಹಾರ ಅರಸಿ ಬರುವವರಿಗೆ ಶುಚಿ ಮತ್ತು ರುಚಿಯಾದ ಶುದ್ಧ ಆಹಾರ ಒದಗಿಸಬೇಕು. ಜತೆಗೆ ಗ್ರಾಹಕರಿಗೆ ನೀರು, ನೆರಳು ಸೇರಿ ಅಗತ್ಯ ಮೂಲ ಸೌಕರ್ಯಗಳನ್ನೊಳಗೊಂಡಂತೆ ಮಳಿಗೆಗಳ ಸುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ ತಿಳಿಸಿದರು.

ಈ ವೇಳೆ ಜಿಲ್ಲಾ ನಗರಾಭಿವೃದ್ಧಿ ಯೋಜನಾ ನಿರ್ದೇಶಕ ಮನೋಹರ್, ಹಂಪಿ ಅಭಿವೃದ್ಧಿ ಪ್ರಾಧಿಕಾರ ಆಯುಕ್ತ ರಮೇಶ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಜಿಲ್ಲಾ ಅಭಿಯಾನ ವ್ಯವಸ್ಥಾಪಕ ದೇವರಾಜ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.



ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಮಾತನಾಡಿದರು.

- ಹಂಪಿಗೆ ಬರುವ ಸಾವಿರಾರು ದೇಶಿವಿದೇಶಿ ಪ್ರವಾಸಿಗ ರಿಗೆ ಒಂದೇ ಸೂರಿನಡಿ ಸ್ವಚ್ಛ ಹಾಗೂ ವೈವಿಧ್ಯಮಯ ಆಹಾರಗಳನ್ನು ಒದಗಿಸುವುದು ಈ ಫುಡ್ ಹಬ್‌ನ ಮುಖ್ಯ ಉದ್ದೇಶವಾಗಿದೆ.
- ಇದರಿಂದ ಸ್ಥಳೀಯ ಬೀದಿಬದಿ ವ್ಯಾಪಾರಿಗಳಿಗೂ ಆರ್ಥಿಕ ಸಬಲೀಕರಣಕ್ಕೆ ಅವಕಾಶ ಸಿಗಲಿದೆ. ಹಂಪಿಯ ಪ್ರವಾಸೋದ್ಯಮಕ್ಕೆ ಹೊಸ ಮೆರುಗು ಸಿಗಲಿದೆ.

ನಾಳೆ ಬಳ್ಳಾರಿಯಲ್ಲಿ ಸಂಗಂ ಸಾಹಿತ್ಯ ಪುರಸ್ಕಾರ ಪ್ರದಾನ ಕಾರ್ಯಕ್ರಮ

• **ಕನ್ನಡಪ್ರಭ ವಾರ್ತೆ** ಬಳ್ಳಾರಿ

ಸಂಗಂ ಟ್ರಸ್ಟ್ ವತಿಯಿಂದ ನಗರ ಹೊರವಲಯದ ಜ್ಞಾನಾಮೃತ ಕಾಲೇಜಿನಲ್ಲಿ ಮೇ 9, 10ರಂದು ಎರಡು ದಿನಗಳ ಸಂಗಂ ಸಾಹಿತ್ಯ ಪುರಸ್ಕಾರ-2025 ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಟ್ರಸ್ಟ್‌ನ ಅಧ್ಯಕ್ಷ, ಹಿರಿಯ ವೈದ್ಯ ಡಾ. ವೈ.ಸಿ. ಯೋಗಾನಂದರೆಡ್ಡಿ ಹಾಗೂ ಪ್ರಧಾನ ಕಾರ್ಯದರ್ಶಿ ಡಾ.ಕೆ. ಶಿವಲಿಂಗಪ್ಪ ಹಂದಿಹಾಳು ಅವರು, ಕಳೆದ ನಾಲ್ಕು ವರ್ಷಗಳ ಹಿಂದೆ ಸಂಗಂ ಟ್ರಸ್ಟ್ ಮೂಲಕ ಸಾಹಿತ್ಯ ಚಟುವಟಿಕೆಗಳನ್ನು ನಡೆಸಿಕೊಂಡು ಬರಲಾಗುತ್ತಿದೆ. ಕಥೆ, ಕಾದಂಬರಿ, ಕಾವ್ಯ ಮತ್ತಿತರ ಪ್ರಕಾರಗಳ ಪೈಕಿ ಒಂದು ಪ್ರಕಾರಕ್ಕೆ ಪುರಸ್ಕಾರ ನೀಡಲಾಗುವುದು. ಈ ಬಾರಿ ಕವನ ಸಂಕಲನ ಪ್ರಕಾರಕ್ಕೆ ಪುರಸ್ಕಾರ ನೀಡಲು 2022ರಿಂದ 2025ರ ವರೆಗೆ ಪ್ರಕಟಗೊಂಡ ಕವನ ಸಂಕಲನಗಳನ್ನು ಆಹ್ವಾನಿಸಲಾಗಿತ್ತು. 160ಕ್ಕೂ ಹೆಚ್ಚು ಕವನ ಸಂಕಲನಗಳು ಬಂದಿದ್ದವು. ಈ ಪೈಕಿ ಪರಿಶೀಲನಾ ಸಮಿತಿ ಅಂತಿಮವಾಗಿ ಐದು ಕೃತಿಗಳನ್ನು ಆಯ್ಕೆ ಮಾಡಿದೆ. ಇದರಲ್ಲಿ ಒಂದನ್ನು ಆಯ್ಕೆ ಮಾಡಿ ಸಂಗಂ ಸಾಹಿತ್ಯ ಪುರಸ್ಕಾರ ನೀಡಲಾಗುವುದು. ಪುರಸ್ಕಾರವು ₹25 ಸಾವಿರ ನಗದು, ಪ್ರಶಸ್ತಿ ಫಲಕ ಒಳಗೊಂಡಿದೆ ಎಂದು ತಿಳಿಸಿದರು.

ಎರಡು ದಿನಗಳ ಕಾರ್ಯಕ್ರಮದಲ್ಲಿ ಮೊದಲ ದಿನ 'ಕನ್ನಡ ತೆಲುಗು ನುಡಿ ಸಾಂಗತ್ಯ' ಕುರಿತು ವಿಚಾರ ಸಂಕಿರಣ ಜರುಗಲಿದೆ. ಕಾವ್ಯ ಸಂವಾದದಲ್ಲಿ ಲೇಖಕ ಚಿದಾನಂದ ಸಾಲಿ, ರವಿಕುಮಾರ್‌ಟೆಲೆಕ್ಸ್, ಭುವನಾ ಹಿರೇಮಠ, ನಾಗಣ್ಣ ಕಿಲಾರಿ, ತೆಲುಗು ಲೇಖಕರಾದ ತಗುಳ್ಳ ಗೋಪಾಲ, ಕಲ್ಯಾಣಿ ಕುಂಜು, ಬಾಲಸುಧಾಕರ ಮೌಳಿ ಭಾಗವಹಿಸುವರು. ಬಳಿಕ ನಡೆಯುವ ಕವಿಗೋಷ್ಠಿಯನ್ನು ಹೈದ್ರಾಬಾದ್‌ನ ಮೋಹನಕೃಷ್ಣ ಚಾಲನೆ ನೀಡಲಿದ್ದಾರೆ. ಮೇದೂರು ತೇಜ ಸಮನ್ವಯಗೊಳಿಸುವರು. ಸಂಜೆ ಸಂಗಂ ಸಾಹಿತ್ಯ ಪುರಸ್ಕಾರದ ಅಂತಿಮ 5 ಮಂದಿ ಕವಿಗಳೊಂದಿಗೆ ಸಂವಾದ ನಡೆಯಲಿದೆ. ಬಳಿಕ 'ಸಂಗಂ ಸಾಹಿತ್ಯ ಪುರಸ್ಕಾರ' ಪ್ರದಾನ ಸಮಾರಂಭ ನಡೆಯಲಿದೆ. ಹಿರಿಯ ಲೇಖಕ ಡಾ. ಅಮರೇಶನುಗಡೋಣಿಪ್ರಶಸ್ತಿ ಪ್ರದಾನಿಸುವರು. ಡಾ.ವೈ.ಸಿ. ಯೋಗಾನಂದ ರೆಡ್ಡಿ ಅಧ್ಯಕ್ಷತೆ ವಹಿಸುವರು. ಜೆ.ಪಿ. ಬಸವರಾಜ, ಸಚಿತಾ ಬನ್ನಾಡಿ, ರಾಜೇಂದ್ರ ಪ್ರಸಾದ್ ತೀರ್ಪುಗಾರರಾಗಿ ಭಾಗವಹಿಸುವರು ಎಂದು ತಿಳಿಸಿದರು.

ಎರಡನೇ ದಿನ ಕಥಾ ಸಮಯ, ಯುವ ಪ್ರಕಾಶಕರ ತವಕ ತಲ್ಲಣ ಕುರಿತು ಚರ್ಚೆಗಳು ನಡೆಯಲಿವೆ. ಕನ್ನಡ, ತೆಲುಗಿನ ಪ್ರಕಾಶಕರು ಭಾಗವಹಿಸುವರು. ನಂತರ ನಡೆಯುವಕವಿಸಮಯಕಾರ್ಯಕ್ರಮದಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಡಾ.ಅಮರೇಶ ನುಗಡೋಣಿ ಅವರೊಂದಿಗೆ ಸಂವಾದ, ವಿಶೇಷ ಸನ್ಮಾನ ಕಾರ್ಯಕ್ರಮ ನಡೆಯಲಿದೆ. ಕೊನೆಯಲ್ಲಿ ಕವಿಗೋಷ್ಠಿ ಜರುಗಲಿದೆ. ರಾಜ್ಯದ ವಿವಿಧ ಜಿಲ್ಲೆಗಳ ಕವಿಗಳು ಪಾಲ್ಗೊಳ್ಳುವರು. ಸಮಾರಂಭದಲ್ಲಿ ನಾಗಣ್ಣ ಕಿಲಾರಿ ಅವರ ಕಾಯಗುಡ್ಡ ಕಾದಂಬರಿ, ಪಿ.ಆರ್. ವೆಂಕಟೇಶ್ ಅವರ ಕಾಯುವ ಕಣ್ಣು ಕವನ ಸಂಕಲನ ಹಾಗೂ ಡಾ.ದಸ್ತಗೀರಸಾಬ್ ದಿನ್ನಿ ಅವರ ಕರುಳ ಬೆಂಕಿಯ ಪತಂಗ ಮಿರ್ಜಾ ಗಾಲಿಬ್ ಕೃತಿಗಳು ಜನಾರ್ಪಣಗೊಳ್ಳಲಿವೆ. ಬಳ್ಳಾರಿ ಹೊರವಲಯದ ಜ್ಞಾನಾಮೃತ ಕಾಲೇಜಿಗೆ ಬರುವ ಸಾಹಿತ್ಯಾಸಕ್ತರಿಗೆ ಸಾರಿಗೆ ವ್ಯವಸ್ಥೆ ಮಾಡಲಾಗಿದೆ ಎಂದರು. ಲೇಖಕರಾದ ಡಾ.ದಸ್ತಗೀರ ಸಾಬ್ ದಿನ್ನಿ, ವೀರೇಂದ್ರ ರಾವಿಹಾಳು, ಡಾ.ನಾಗರಾಜ ಬಸರಕೋಡು ಇದ್ದರು.

ಬಿಎಸ್‌ವೈ ಅಭಿಮಾನೋತ್ಸವಕ್ಕೆ ಅಭಿಮಾನಿಯ ಸೈಕಲ್ ಸವಾರಿ

• **ಕನ್ನಡಪ್ರಭ ವಾರ್ತೆ** ಹರಪನಹಳ್ಳಿ

ಚಿತ್ರದುರ್ಗದಲ್ಲಿ ಮೇ 9ರಂದು ನಡೆಯಲಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಗದಗದಿಂದ ಸೈಕಲ್ ಮೂಲಕ ತೆರಳುತ್ತಿರುವ ಅಭಿಮಾನಿ ಪ್ರಭು ದಿಗ್ಗಾವಿ ಅವರನ್ನು ಗುರುವಾರ ಹರಪನಹಳ್ಳಿ ಬಿಜೆಪಿ ಕಚೇರಿಯಲ್ಲಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಕೆ. ಶೇಖರಪ್ಪ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಆರ್. ಲೋಕೇಶ್, ಪ್ರಸನ್ನ, ಮಾರುತಿ, ಮುಖಂಡರಾದ ಆಲೂರು ಶ್ರೀನಿವಾಸ, ಜಾವೀದ್ ಇದ್ದರು.



ಬಿಎಸ್‌ವೈ ಅಭಿಮಾನೋತ್ಸವಕ್ಕೆ ಸೈಕಲ್ ಮೂಲಕ ತೆರಳುತ್ತಿರುವ ಅಭಿಮಾನಿ ಪ್ರಭು ದಿಗ್ಗಾವಿ ಅವರನ್ನು ಹರಪನಹಳ್ಳಿ ಬಿಜೆಪಿ ಕಚೇರಿಯಲ್ಲಿ ಸನ್ಮಾನಿಸಲಾಯಿತು.

ಅಪಘಾತ: ಬೈಕ್ ಸವಾರ ಸಾವು

• **ಕನ್ನಡಪ್ರಭ ವಾರ್ತೆ** ಹಗರಿಬೊಮ್ಮನಹಳ್ಳಿ



ತಾಲೂಕಿನ ವಲ್ಲಭಾಪುರ ಗ್ರಾಮದ ರಸ್ತೆ ತಿರುವಿನಲ್ಲಿ ಸರಕು ಸಾಗಾಣಿಕೆ ವಾಹನ ಮತ್ತು ಬೈಕ್ ಮುಖಾಮುಖಿ ಡಿಕ್ಕಿಯಾಗಿ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟ ಘಟನೆ ಗುರುವಾರ ನಡೆದಿದೆ.

ಪಟ್ಟಣದ ವಿವೇಕಾನಂದ ನಗರದ ನಿವಾಸಿ ಮುಂಡರಗಿ ನಾಗರಾಜ್ (38) ಮೃತ ಬೈಕ್ ಸವಾರ. ಈತ 20 ದಿನದ ಹಿಂದೆ ವಿವಾಹವಾಗಿದ್ದ. ಕೊಟ್ಟೂರಿನ ಎಚ್‌ಡಿಎಫ್‌ಸಿ ಬ್ಯಾಂಕ್‌ನಲ್ಲಿ ಸೆಕ್ಯುರಿಟಿ ಗಾರ್ಡ್ ಆಗಿ ಕಾರ್ಯ ನಿರ್ವಹಿಸುತ್ತಿದ್ದರು. ಕರ್ತವ್ಯ ಮುಗಿಸಿ ಮಧ್ಯಾಹ್ನ ಪಟ್ಟಣಕ್ಕೆ ವಾಪಸಾಗುತ್ತಿದ್ದಾಗ ಸರಕು ಸಾಗಾಣಿಕೆ ವಾಹನ ಗುದ್ದಿ ಪರಾರಿಯಾಗಿದೆ. ಕೇಸು ದಾಖಲಾಗಿದೆ.

ಮೇ ಅಂತ್ಯದಲ್ಲಿ ತುಂಗಭದ್ರಾ ಹೂಳು ಜಾತ್ರೆ

• **ಕನ್ನಡಪ್ರಭ ವಾರ್ತೆ** ಬಳ್ಳಾರಿ

ತುಂಗಭದ್ರಾ ಜಲಾಶಯದಲ್ಲಿ ಸಂಗ್ರಹವಾಗಿರುವ ಹೂಳು ತೆಗೆಯಲು ಒತ್ತಾಯಿಸಿ ಈ ತಿಂಗಳ ಕೊನೆಯಲ್ಲಿ ತುಂಗಭದ್ರಾ ಹೂಳಿನ ಜಾತ್ರೆ ಹಮ್ಮಿಕೊಳ್ಳಲಾಗಿದೆ. ನೂರಕ್ಕೂ ಹೆಚ್ಚು ಟ್ರ್ಯಾಕ್ಟರ್, ರೈತರು ಚಳವಳಿಯಲ್ಲಿ ಭಾಗವಹಿಸಲಿದ್ದಾರೆ ಎಂದು ತುಂಗಭದ್ರಾ ರೈತ ಸಂಘದ ಅಧ್ಯಕ್ಷ ದರೂರು ಪುರುಷೋತ್ತಮಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳ ಜೀವನಾಡಿಯಾಗಿರುವ ಜಲಾಶಯದಲ್ಲಿ ಹೂಳಿನ ಪ್ರಮಾಣ ಹೆಚ್ಚುತ್ತಲೇ ಇದೆ. ನೀರಿನ ಸಂಗ್ರಹ ಸಾಮರ್ಥ್ಯ ಕುಸಿತಗೊಳ್ಳುತ್ತಿದೆ. ಜಲಾಶಯವನ್ನೇ ಆಶ್ರಯಿಸಿರುವ 3 ರಾಜ್ಯಗಳ ರೈತರು ಆತಂಕಗೊಂಡಿದ್ದಾರೆ. ಪರ್ಯಾಯ ಜಲಾಶಯ ಮಾಡುವುದರ ಜೊತೆಗೆ ಹೂಳು ತೆಗೆಯುವ ಕಾಳಜಿ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.

2017ರಲ್ಲಿ ಸಂಘದಿಂದ ಹೂಳು ತೆಗೆಯುವ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗಿತ್ತು. ನಂತರದಲ್ಲಿ ರಾಜ್ಯ ಸರ್ಕಾರಕ್ಕೆ ಅನೇಕ ಬಾರಿ ಮನವಿ ಸಲ್ಲಿಸಲಾಯಿತು. ಆದರೆ, 8 ವರ್ಷಗಳಾದರೂ ಈವರೆಗೆ ಡ್ಯಾಂ ಹೂಳು ತೆಗೆವ ಕುರಿತು ನಿಲುವು ತೆಗೆದುಕೊಳ್ಳದೇ ರೈತ ವಿರೋಧಿಯಾಗಿ ವರ್ತಿಸುತ್ತಿದೆ ಎಂದರು.

ಇತ್ತೀಚೆಗೆ ಅಖಂಡ ಬಳ್ಳಾರಿ ಜಿಲ್ಲೆಗೆ ಆಗಮಿಸಿದ್ದ ಡಿಸಿಎಂ ಡಿ.ಕೆ. ಶಿವಕುಮಾರ್‌ಗಮನಕ್ಕೆ ತಂದಾಗ, 'ಹೂಳು ತೆಗೆಯಲು ಯಾವುದೇ ಅಭ್ಯಂತರವಿಲ್ಲ' ಎಂದು ಹೇಳಿದ್ದಾರೆ. ಹೀಗಿರುವಾಗ ಪೊಲೀಸರ ಮಧ್ಯಪ್ರವೇಶ ಏಕೆ? ಎಂದು ಪ್ರಶ್ನಿಸಿದರು.

ಗಣಿಗಾರಿಕೆಯಿಂದಾಗಿ ಜಲಾಶಯದಲ್ಲಿ ಹೂಳು ತುಂಬಿಕೊಂಡಿದೆ. ವಿವಿಧ ಕೈಗಾರಿಕೆಗಳು ಜಲಾಶಯದಿಂದ ಅಪಾರ ಪ್ರಮಾಣದ ನೀರು ಪಡೆಯುತ್ತಿವೆ. ಜಿಲ್ಲಾ ಖನಿಜ ನಿಧಿ ಬಳಸಿಕೊಂಡು ಹೂಳು ತೆಗೆಯುವ ಕಾರ್ಯಕ್ಕೆ ಮುಂದಾಗಬೇಕು. ಹೂಳು ತೆಗೆಯುವ ಜತೆಗೆ ಸಮಾನಾಂತರ ಜಲಾಶಯ ನಿರ್ಮಾಣಕ್ಕೂ ಮುಂದಾಗಬೇಕು ಎಂದರು.

ನೀರಾವರಿ ಇಲಾಖೆಯ ನಿವೃತ್ತ ಮುಖ್ಯ ಎಂಜಿನಿಯರ್‌ವಿ.ಪಿ. ಉದ್ದಿಹಾಳು ಮಾತನಾಡಿ, ಕಳೆದ ವರ್ಷ ತುಂಗಭದ್ರಾ ಜಲಾಶಯದ ಕ್ರಸ್ಟ್‌ಗೇಟ್ ಕಿತ್ತು ಹೋದವು. ಐದಾರು ವರ್ಷಗಳ ಹಿಂದೆಯೇ ಕ್ರಸ್ಟ್‌ಗೇಟ್ ಬದಲಾಯಿಸಬೇಕಿತ್ತು. ಆದರೆ, ನಿರ್ಲಕ್ಷ್ಯ ವಹಿಸಿದ್ದರಿಂದ ಗೇಟ್ ಕಿತ್ತು ಹೋದವು. ಇದರಿಂದಾಗಿ ಮೂರು ರಾಜ್ಯಗಳ ರೈತರು ಎರಡನೇ ಬೆಳೆ ಕಳೆದುಕೊಂಡರು. ಕ್ರಸ್ಟ್‌ಗೇಟ್ ಅಳವಡಿಕೆಗೂ ತುಂಗಭದ್ರಾ ರೈತ ಸಂಘದಿಂದ ಹೋರಾಟ ನಡೆಸಲಾಯಿತು. ಸಂಘವು ರೈತರ ಧ್ವನಿಯಾಗಿ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಶ್ರೀಧರಗೌಡ ಜಾಲಿಹಾಳು, ಗೋವಿಂದಪ್ಪ ಕೊಂಚಿಗೇರಿ, ವೀರಭದ್ರನಾಯಕ, ಗಾದಿಲಿಂಗನಗೌಡ ಸುದ್ದಿಗೋಷ್ಠಿಯಲ್ಲಿದ್ದರು.

ಯಡಿಯೂರಪ್ಪ ಕಾರ್ಯಕ್ರಮಕ್ಕೆ 15 ಸಾವಿರ ಜನ

ಕೂಡ್ಲಿಗಿ: ಕ್ಷೇತ್ರದಿಂದ ಕಾರ್ಯಕ್ರಮಕ್ಕೆ ಸುಮಾರು 15 ಸಾವಿರ ಜನತೆ ತೆರಳಲಿದ್ದಾರೆ. ಈಗಾಗಲೇ ಸಾರಿಗೆ ವ್ಯವಸ್ಥೆ ಸಹ ಕಲ್ಪಿಸಲಾಗಿದೆ ಎಂದು ಮಾಜಿ ಸಚಿವ ಶ್ರೀರಾಮುಲು ಹೇಳಿದರು. ಬಿಎಸ್‌ವೈ ಅಭಿಮಾನೋತ್ಸವದ ಪೋಸ್ಟರ್, ಸ್ಟಿಕ್ಕರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಚಿತ್ರದುರ್ಗದಲ್ಲಿ ನಡೆಯುವ ಬಿಎಸ್‌ವೈ ಅಭಿಮಾನೋತ್ಸವ ಮುಂಬರುವ ಚುನಾವಣೆಯ ಶಕ್ತಿ ಪ್ರದರ್ಶನ ಸಹ ಆಗಲಿದೆ. ಕಾಂಗ್ರೆಸ್ ಮುಕ್ತ ಭಾರತಕ್ಕೆ ಈ ವೇದಿಕೆ ಅಡಿಪಾಯ ಹಾಕಬಲ್ಲದು ಎಂದರು. ಸತತ 50 ವರ್ಷಗಳ ರಾಜಕೀಯ ಜೀವನದಲ್ಲಿ ಬಿಜೆಪಿಯನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತರುವ ಮೂಲಕ ಶ್ರಮಿಸಿದ ಬಿ.ಎಸ್. ಯಡಿಯೂರಪ್ಪ ನಾಲ್ಕು ಬಾರಿ ಮುಖ್ಯಮಂತ್ರಿ ಸ್ಥಾನ ಅಲಂಕರಿಸಿ ರಾಜ್ಯದ ಎಲ್ಲ ಜನತೆಯ ಮಾಸ್ ಲೀಡರ್‌ಆಗಿದ್ದಾರೆ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಕೆ. ನಾಗರಾಜ, ಮುಖಂಡರಾದ ಎಂ.ಬಿ. ಅಯ್ಯನಹಳ್ಳಿ ನಾಗಭೂಷಣ, ಚಂದ್ರಮೌಳಿ, ಕುರಿಹಟ್ಟಿ ರಾಮಣ್ಣ, ನಾಗರಾಜ, ಅಮಲಾಪುರ ಸುದರ್ಶನ್, ಎಲ್. ಪವಿತ್ರಾ, ಲಕ್ಷ್ಮಿಬಾಯಿ ಕಾಂತರಾಜ್, ಹುಲಿಕೆರೆ ಗೀತಾ, ಬಾಲಣ್ಣ, ಗುರಿಕಾರ ರಾಘವೇಂದ್ರ, ಭರತ್ ರಾಮ್ ಸೇರಿದಂತೆ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.



ಕೂಡ್ಲಿಗಿ ಪಟ್ಟಣದ ಪ್ರವಾಸಿಮಂದಿರದಲ್ಲಿ ನಡೆದ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವ ಪೂರ್ವಭಾವಿ ಸಭೆಯಲ್ಲಿ ಶ್ರೀರಾಮುಲು ಸೇರಿದಂತೆ ಮುಖಂಡರು ಅಭಿಮಾನೋತ್ಸವದ ಸ್ಟಿಕ್ಕರ್, ಪೋಸ್ಟರ್ ಬಿಡುಗಡೆಗೊಳಿಸಿದರು.

ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಗೌರವಗಳು :

ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್‌ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರದರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026

ಗರಿಷ್ಠ 37°c | ಕನಿಷ್ಠ 27°c

ಪಂಚ ಗ್ಯಾರಂಟಿ ಯೋಜನೆಯಿಂದ 2 ಉಪಚುನಾವಣೆ ಗೆಲುವು

• **ಕನ್ನಡಪ್ರಭ ವಾರ್ತೆ** ಕೂಡ್ಲಿಗಿ

ಇತ್ತೀಚೆಗೆ ನಡೆದ ಉಪಚುನಾವಣೆಗಳಲ್ಲಿ ಬಾಗಲಕೋಟೆ, ದಾವಣಗೆರೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲಲು ಕಾಂಗ್ರೆಸ್ ಪಕ್ಷದ ಪಂಚ ಗ್ಯಾರಂಟಿಗಳೇ ಕಾರಣವಾಗಿದೆ ಎಂದು ಎನ್.ಎಸ್.ಯು.ಐ. ಜಿಲ್ಲಾ ಕಾರ್ಯದರ್ಶಿ ಟಿ.ಅಕ್ಷತಾ ತಿಳಿಸಿದ್ದಾರೆ.ಅವರು ಈ ಬಗ್ಗೆ ಪ್ರಕಟಣೆ ನೀಡಿದ್ದು, ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಜೊತೆಗೆ ಜನಪರ ಯೋಜನೆಗಳನ್ನು ರಾಜ್ಯದ ಜನತೆಗೆ ನೀಡಿರುವುದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಕಾರಣವಾಗಿದೆ. ಆಡಳಿತ ವಿರೋಧಿ ಅಲೆ ಇದೆ ಎಂದು ಚುನಾವಣೆ ಪೂರ್ವದಲ್ಲಿ ಈ ಎರಡು ಕ್ಷೇತ್ರಗಳಲ್ಲಿ ಸುದ್ದಿಯಾಗಿತ್ತು. ಆದರೆ ಉಪಚುನಾವಣೆಯ ಫಲಿತಾಂಶದ ಮೂಲಕ ಕಾಂಗ್ರೆಸ್ ಸರ್ಕಾರದ ಧೋರಣೆ, ನೀತಿ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿಷ್ಪಕ್ಷಪಾತ ಆಡಳಿತದಿಂತ ಜನತೆ ಕಾಂಗ್ರೆಸ್ ಬಗ್ಗೆ ಉತ್ತಮ ವಿಶ್ವಾಸ ಹೊಂದಿದ್ದಾರೆ. ಈ ಚುನಾವಣೆ ಫಲಿತಾಂಶ ಮುಂದಿನ ವಿಧಾನಸಭಾ ಚುನಾವಣೆಯ ದಿಕ್ಸೂಚಿಯಾಗಿದೆ ಎಂದು ತಿಳಿಸಿದ್ದಾರೆ.



ಸಂಡೂರು ತಾಲೂಕಿನ ಜಿಗೇನಹಳ್ಳಿಯಲ್ಲಿ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದ ಸಮಾಜ ಕಾರ್ಯ ಅಧ್ಯಯನ ವಿಭಾಗದಿಂದ ಹಮ್ಮಿಕೊಂಡಿರುವ ಗ್ರಾಮೀಣ ಸಮಾಜ ಕಾರ್ಯ ಶಿಬಿರದಲ್ಲಿ ಗ್ರಾಮಸ್ಥರ ಆರೋಗ್ಯ ತಪಾಸಣೆ ನಡೆಸಲಾಯಿತು.



ಕುರುಗೋಡುದ ಬಾದನಹಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಸಾಪ 112ನೇ ಸಂಸ್ಥಾಪನಾ ದಿನಾಚರಣೆಯನ್ನು ಪ್ರಾಚಾರ್ಯೆ ಡಾ.ಶಾಂತಲಾ ಉದ್ಘಾಟಿಸಿದರು. ಈ ವೇಳೆ ಡಾ. ತಿಪ್ಪೇರುದ್ರ ಸಂಡೂರು, ಪುರಸಭೆ ಅಧ್ಯಕ್ಷ ಟಿ.ಶೇಖಣ್ಣ ಮತ್ತಿತರರು ಇದ್ದರು.

ಜನರ ಕೈಗೆ ಸಿಗದ ಕೂಡ್ಲಿಗಿ ತಾಲೂಕು ಅಧಿಕಾರಿಗಳು!

ಅಧಿಕಾರಿಗಳು ಸಭೆಗಳಿಗಷ್ಟೇ ಸೀಮಿತ | ಕಚೇರಿಗೆ ಅಲೆದಾಡಿದರೂ ಜನತೆಗೆ ಸಿಗುತ್ತಿಲ್ಲ



ಕೂಡ್ಲಿಗಿ ತಾಲೂಕು ಚೌಡಾಪುರ ಕೆರೆ ಸ್ಥಿತಿ



ಕೂಡ್ಲಿಗಿ ಸರ್ಕಾರಿ ಆಸ್ಪತ್ರೆಯ ನೋಟ.

• **ಭೀಮಣ್ಣ ಗಜಾಪುರ**
ಕನ್ನಡಪ್ರಭ ವಾರ್ತೆ ಕೂಡ್ಲಿಗಿ

ಕೂಡ್ಲಿಗಿ ಕ್ಷೇತ್ರದಲ್ಲಿ ಶಾಸಕರು ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿದ್ದರೂ ಶಾಸಕರ ವೇಗಕ್ಕೆ ಅಧಿಕಾರಿಗಳು ಓಡುತ್ತಿಲ್ಲ. ಹೀಗಾಗಿ ಕೂಡ್ಲಿಗಿಯಂತಹ ಹಿಂದುಳಿದ ತಾಲೂಕಿನಲ್ಲಿ ಜನತೆಯ ಸಮಸ್ಯೆಗಳಿಗೆ ಬಹುತೇಕ ಅಧಿಕಾರಿಗಳು ಸ್ಪಂದಿಸುತ್ತಿಲ್ಲ.

ಈ ಬಾರಿಯ ಬೇಸಿಗೆ ಹಿಂದಿಂದಿಗಿಂತಲೂ ಭೀಕರವಾಗಿದೆ. ಗುಡೇಕೋಟೆ, ಹೊಸಹಳ್ಳಿಹೋಬಳಿಯ ಕೆಲವು ಹಳ್ಳಿಗಳಲ್ಲಿ ನೀರಿನ ಸಮಸ್ಯೆ ಇದ್ದರೂ ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆ ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬಂತಾಗಿದೆ. ತಾಲೂಕು ಕಚೇರಿಯಲ್ಲಿ ಉಳ್ಳವರಿಗೆ, ಮದ್ಯವರ್ತಿಗಳಿಗೆ ಮಾತ್ರ ಹೋದ ಕೂಡಲೇ ಕೆಲಸಗಳು ಆಗುತ್ತಿವೆ. ನೇರವಾಗಿ ರೈತರು, ಕೂಲಿಕಾರ್ಮಿಕರು ಹೋದರೆ ಅಲೆದಾಡಿಸುತ್ತಾರೆ. ಕೂಡ್ಲಿಗಿ ತಾಲೂಕಿನಲ್ಲಿ 80 ಕೆರೆಗಳಿಗೆ ನೀರು ತುಂಬಿಸುವ ಅಂದಾಜು ₹800 ಕೋಟಿ ಯೋಜನೆಗೆ ಚಾಲನೆ ನೀಡಿದರೂ ಕೆರೆಗಳಿಗೆ ಇನ್ನೂ ನೀರು ಬಂದಿಲ್ಲ.

ತಾಲೂಕು ಸರ್ಕಾರಿ ಆಸ್ಪತ್ರೆ ಸೇರಿದಂತೆ ತಾಲೂಕಿನ ಬಹುತೇಕ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರಿಲ್ಲ. ಯಾವುದೇ ರೋಗಿಗಳಿಗೆ ಪ್ರಥಮ ಚಿಕಿತ್ಸೆ ನೀಡಿ ಜಿಲ್ಲಾಸ್ಪತ್ರೆಗೆ ಕಳುಹಿಸುವುದು ವಾಡಿಕೆಯಾಗಿದೆ. ಕೆಲವು ತಜ್ಞರು ಇದ್ದರೂ ಜೀವದ ಅಳಿವು, ಉಳಿವು ಇದ್ದಾಗಲೂ ನಮಗ್ಯಾಕೆ ರಿಸ್ಕ್ ಎಂದು ಕೂಡ್ಲಿಗಿಯಲ್ಲಿಯೇ ಆಪರೇಷನ್, ಚಿಕಿತ್ಸೆ ಮಾಡುವುದಿದ್ದರೂ ಮಾಡುತ್ತಿಲ್ಲ. ಕೂಡ್ಲಿಗಿಯಲ್ಲಿ ಶಾಸಕರೇ ವೈದ್ಯರಿದ್ದರೂ ಅವರಿಗೆ ಆಸ್ಪತ್ರೆಗಳಿಗೆ ಭೇಟಿ ನೀಡಿ ತಾಲೂಕಿನ ಅತ್ಯಂತ ಕಡುಬಡವರಿಗೆ ಸೂಕ್ತ ಚಿಕಿತ್ಸೆ ನೀಡಲು ಆಗುತ್ತಿಲ್ಲ. ಇಲ್ಲಿಯ ಜನತೆ ಹೊಸಪೇಟೆ, ದಾವಣಗೆರೆ, ಮಣಿಪಾಲ್ ಮುಂತಾದ ಕಡೆ ಖಾಸಗಿ ಆಸ್ಪತ್ರೆಗಳಿಗೆ ಹೋಗುತ್ತಿದ್ದಾರೆ.

ಡಕೋಟಾ ಡಿಪೋ: ಸಂಡೂರು, ಹಗರಿಬೊಮ್ಮನಹಳ್ಳಿ, ಹರಪನಹಳ್ಳಿ, ಹೂವಿನಹಡಗಲಿ ಡಿಪೋಗಳಲ್ಲಿ ರಾಜಹಂಸ, ಸ್ಲೀಪರ್ ಕೋಚ್ ಬಸ್‌ಗಳಿವೆ. ಆದರೆ ಬಳ್ಳಾರಿ, ಹೊಸಪೇಟೆ ಬಿಟ್ಟರೆ ಅತಿ ಹಳೆಯ ಡಿಪೋ ಎಂಬ ಹೆಗ್ಗಳಿಕೆ ಹೊಂದಿರುವ ಅಖಂಡ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ಡಿಪೋದಲ್ಲಿ ಈಗಲೂ ಡಕೋಟ ಬಸ್ಸುಗಳೇ ರಾರಾಜಿಸುತ್ತವೆ.

ಬೆಳಿಗ್ಗೆ, ಸಂಜೆಯಾದರೆ ಕೊಟ್ಟೂರು- ಕೂಡ್ಲಿಗಿ ಪಟ್ಟಣಗಳಿಗೆ ಒಂದು ಬಸ್ ಸಹ ಇರುವುದಿಲ್ಲ. ಡಿಪೋದಲ್ಲಿ ಒಂದು ರಾಜಹಂಸ, ಒಂದು ಸ್ಲೀಪರ್ ಕೋಚ್ ಬಸ್ ಸಹ ಇಲ್ಲದಿದ್ದರೂ ನಮ್ಮ ಶಾಸಕರು ಮಾತ್ರ ಈ ಬಗ್ಗೆ ತುಟಿ ಬಿಚ್ಚುವುದಿಲ್ಲ. ಹೀಗಾಗಿ ಅಧಿಕಾರಿಗಳು ಆಡಿದ್ದೇ ಆಟ ಎನ್ನುವಂತಾಗಿದೆ.

> **ಕೂಡ್ಲಿಗಿ ತಾಲೂಕಿನಲ್ಲಿ ಈ ಬಾರಿ ಕುಡಿವ ನೀರಿನ ಸಮಸ್ಯೆ ಕಡಿಮೆಯಾಗಿದೆ. ಹತ್ತಾರು ಬಾರಿ ಅಧಿಕಾರಿಗಳ ಸಭೆ ಕರೆದಿದ್ದು, ಶಾಸಕರ ಅಧ್ಯಕ್ಷತೆಯಲ್ಲೂ ಹಲವು ಸಭೆಗಳು ನೀರು, ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ ನಡೆದಿವೆ. ತಾಲೂಕಿನ 25 ಗ್ರಾಪಂ ಅಧಿಕಾರಿಗಳು ಕುಡಿಯುವ ನೀರಿನ ಸಮಸ್ಯೆ ಬರುವ ಮುಂಚೆ ಅಲರ್ಟ್ ಇರುವಂತೆ ಎಚ್ಚರಿಸಲಾಗಿದೆ.**
>
> • **ಕೆ.ನರಸಪ್ಪ** ಕೂಡ್ಲಿಗಿ ತಾಪಂ ಇಒ

> **ಕೂಡ್ಲಿಗಿ ತಾಲೂಕು ಆಡಳಿತ ಸಂಪೂರ್ಣ ಜನಹಿತ ಮರೆತಿದೆ. ತಾಲೂಕು ಕಚೇರಿಯಲ್ಲಿ ಉಳ್ಳವರಿಗೆ ಮಾತ್ರ ಮಣೆ ಹಾಕುವ ಕೆಲಸ ಮಾಡುತ್ತಿದ್ದಾರೆ. ಮಧ್ಯವರ್ತಿಗಳ ಹಾವಳಿಯಿಂದ ಕೆಲವು ಕಚೇರಿಗಳು ಜನಸೇವೆ ಮರೆತಿವೆ.**
>
> • **ಗುನ್ನಳ್ಳಿ ರಾಘವೇಂದ್ರ**, ಸಿಪಿಐಎಂ ಹಿರಿಯ ಮುಖಂಡ

ಕನ್ನಡ ಸಾಹಿತ್ಯಕ್ಕೆ ಸಾಕಷ್ಟು ಕೊಡುಗೆ ನೀಡಿದ ಕಸಾಪ

• **ಕನ್ನಡಪ್ರಭ ವಾರ್ತೆ** ಕುರುಗೋಡು

ಕನ್ನಡ ಭಾಷೆ, ಪರಂಪರೆ, ಸಾಹಿತ್ಯವನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಕಸಾಪ ಬಹುದೊಡ್ಡ ಕೊಡುಗೆ ನೀಡಿದೆ ಪ್ರಾಚಾರ್ಯೆ ಡಾ.ಶಾಂತಲಾ ತಿಳಿಸಿದರು.

ಇಲ್ಲಿನ ಬಾದನಹಟ್ಟಿ ಹೋಗುವ ಹೆದ್ದಾರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಸಾಪ 112ನೇ ಸಂಸ್ಥಾಪನಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳು ಕನ್ನಡ ಮಾತೃಭಾಷೆಯನ್ನು ಉಳಿಸುವ ಬಹುದೊಡ್ಡ ಕಾರ್ಯ ಮಾಡುತ್ತಿದೆ ಎಂದರು.

ಕಸಾಪ ತಾಲೂಕು ಅಧ್ಯಕ್ಷ ಮಸೂತಿ ನಾಗರಾಜ್ ಮಾತನಾಡಿ, ಕನ್ನಡ ಭಾಷೆಯ ಪ್ರೋತ್ಸಾಹಕ್ಕಾಗಿ, ಕನ್ನಡ ಕಲಿಯಲು ಬಯಸುವವರಿಗೆ ಕಸಾಪ ಕನ್ನಡ ಪ್ರವೇಶ, ಕಾವ, ಜಾಣ, ರತ್ನ ಪರೀಕ್ಷೆಗಳನ್ನು ನಡೆಸುವ ಮೂಲಕ ಕನ್ನಡ ಪ್ರೀತಿ ಬೆಳೆಸುವಲ್ಲಿ ಸದಾ ಕ್ರಿಯಾಶೀಲವಾಗಿದೆ ಎಂದರು.

ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಶಿಕ್ಷಕರು ಹಾಗೂ 10ನೇ ತರಗತಿಯಲ್ಲಿ ಕನ್ನಡ ಭಾಷೆಯಲ್ಲಿ 125ಕ್ಕೆ 125 ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಿದರು.

ಸಹಾಯಕ ಪ್ರಾಧ್ಯಾಪಕ ಡಾ. ತಿಪ್ಪೇರುದ್ರ ಸಂಡೂರು, ಪುರಸಭೆ ಅಧ್ಯಕ್ಷ ಟಿ.ಶೇಖಣ್ಣ,ಮಣ್ಣೂರು ಬಸವರಾಜ, ವಿ.ಈರೇಶಪ್ಪ, ಉದಯಕುಮಾರ, ವೀರತಯ್ಯ, ಕೆ.ವೀರಭದ್ರಗೌಡ, ಕೆ.ಬಸವರಾಜ ಇದ್ದರು.

> ▪ ಸರ್ಕಾರಿ ಶಾಲೆಗಳು ಕನ್ನಡ ಮಾತೃಭಾಷೆಯನ್ನು ಉಳಿಸುವ ಬಹುದೊಡ್ಡ ಕಾರ್ಯ ಮಾಡುತ್ತಿದೆ
>
> ▪ ಕಸಾಪ ಕನ್ನಡ ಪ್ರವೇಶ, ಕಾವ, ಜಾಣ, ರತ್ನ ಪರೀಕ್ಷೆಗಳನ್ನು ನಡೆಸುವ ಮೂಲಕ ಕನ್ನಡ ಪ್ರೀತಿ ಬೆಳೆಸುವಲ್ಲಿ ಸದಾ ಕ್ರಿಯಾಶೀಲವಾಗಿದೆ

ಅಭಿವೃದ್ಧಿ ಹೆಸರಿನಲ್ಲಿ ರೈತರ ಫಲವತ್ತಾದ ಜಮೀನು ವಶ

ಭಾರತದ ಕೃಷಿ ಬಿಕ್ಕಟ್ಟು-ವಿಶೇಷ ಉಪನ್ಯಾಸದಲ್ಲಿ ಮಾಧವರೆಡ್ಡಿ



ಬಳ್ಳಾರಿಯ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಭಾರತದ ಕೃಷಿ ಬಿಕ್ಕಟ್ಟು ಕುರಿತು ಮಾಧವರೆಡ್ಡಿ ಕರೂರು ಮಾತನಾಡಿದರು.

• **ಕನ್ನಡಪ್ರಭವಾರ್ತೆ** ಬಳ್ಳಾರಿ

ರಾಜ್ಯ ಸರ್ಕಾರ ಅಭಿವೃದ್ಧಿ ಯೋಜನೆಗಳ ಹೆಸರಿನಲ್ಲಿ ಕೃಷಿ ಭೂಮಿ ಸ್ವಾಧೀನಪಡಿಸಿಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ರೈತ ಸಂಘದ ರಾಜ್ಯಾಧ್ಯಕ್ಷ ಮಾಧವರೆಡ್ಡಿ ಕರೂರು ಕಳವಳ ವ್ಯಕ್ತಪಡಿಸಿದರು.

ನಗರದ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ (ಸ್ವಾಯತ್ತ) ಕಾಲೇಜಿನ ಸಭಾಂಗಣದಲ್ಲಿ ಅರ್ಥಶಾಸ್ತ್ರ ವಿಭಾಗದಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾರತದ ಕೃಷಿ ಬಿಕ್ಕಟ್ಟು ಕುರಿತು ಅವರು ವಿಶೇಷ ಉಪನ್ಯಾಸ ನೀಡಿದರು.

ಬೃಹತ್ ಕಾರ್ಖಾನೆಗಳು, ವಿಮಾನ ನಿಲ್ದಾಣ, ಹೆದ್ದಾರಿ ನಿರ್ಮಾಣ ಸೇರಿದಂತೆ ಅನೇಕ ಯೋಜನೆಗಳಿಗೆ ರಾಜ್ಯದಲ್ಲಿ ಫಲವತ್ತಾದ ಕೃಷಿ ಭೂಮಿಯನ್ನು ಸರ್ಕಾರ ಬಳಸಿಕೊಳ್ಳುತ್ತಿದೆ. ರೈತರಿಗೆ ಉದ್ಯೋಗದ ಆಮಿಷವೊಡ್ಡಿ ವಂಚಿಸಲಾಗುತ್ತಿದೆ. ಅಭಿವೃದ್ಧಿಗೆ ಫಲವತ್ತಾದ ಜಮೀನುಗಳನ್ನು ವಶಪಡಿಸಿಕೊಳ್ಳುವ ಬದಲು ನಿರುಪಯುಕ್ತ ಜಮೀನುಗಳ ಖರೀದಿ ಮಾಡಬೇಕು. ನಾನಾಯೋಜನೆಗಳನೆಪದಲ್ಲಿಫಲವತ್ತಾದ ಭೂಮಿಗೆ ಧಕ್ಕೆ ತರುವಂತಾಗಬಾರದು ಎಂದು ಹೇಳಿದರು.

ರಾಜ್ಯ ಸರ್ಕಾರ ಜಮೀನು ಕಳೆದುಕೊಂಡ ರೈತರಿಗೆ ವೈಜ್ಞಾನಿಕವಾದ ಬೆಲೆನೀಡುತ್ತಿಲ್ಲ. ಜಮೀನುಕಳೆದುಕೊಂಡು ಪರಿಹಾರಕ್ಕಾಗಿ ಅಲೆಯುವ ನಿರ್ಮಾಣ ಸೃಷ್ಟಿಸಲಾಗುತ್ತಿದೆ. ಕೈಗಾರಿಕೆ ಹೆಸರಿನಲ್ಲಿ ವಶಪಡಿಸಿಕೊಂಡ ಜಮೀನುಗಳಲ್ಲಿ ಹತ್ತಾರು ವರ್ಷಗಳಾದರೂ ಕೈಗಾರಿಕೆ ತಲೆ ಎತ್ತುವುದಿಲ್ಲ. ಬಳಿಕ ಅದೇ ಜಮೀನನ್ನು ಬಂಡವಾಳ ಶಾಹಿಗಳ ಕೈಗೆ ಒಪ್ಪಿಸುವ ಕೃತ್ಯಕ್ಕೆ ಸರ್ಕಾರಗಳೇ ಮುಂದಾದರೆ ಈ ದೇಶದ ಕೃಷಿಕನ ಪಾಡೇನು ಎಂದು ಪ್ರಶ್ನಿಸಿದರಲ್ಲದೆ, ಒಂದೆಡೆ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ, ಸಕಾಲಕ್ಕೆ ಬೆಳೆಗೆನೀರುಸಿಗದೆರೈತರುಒದ್ದಾಡುತ್ತಿದ್ದರೆ ಮತ್ತೊಂದೆಡೆ ಸರ್ಕಾರದ ಜನವಿರೋಧಿ ಭೂಸ್ವಾಧೀನ ನಡೆಗೆ ಮತ್ತಷ್ಟು ಸಂಕಷ್ಟ ಎದುರಿಸುವಂತಾಗಿದೆ ಎಂದು ಹೇಳಿದರು.

> **ರಾಜ್ಯ ಸರ್ಕಾರ ಜಮೀನು ಕಳೆದುಕೊಂಡ ರೈತರಿಗೆ ವೈಜ್ಞಾನಿಕವಾದ ಬೆಲೆ ನೀಡುತ್ತಿಲ್ಲ. ಜಮೀನು ಕಳೆದುಕೊಂಡು ಪರಿಹಾರಕ್ಕಾಗಿ ಅಲೆಯುವ ನಿರ್ಮಾಣ ಸೃಷ್ಟಿಸಲಾಗುತ್ತಿದೆ.**
>
> • **ಮಾಧವರೆಡ್ಡಿ ಕರೂರು** ರೈತ ಸಂಘದ ರಾಜ್ಯಾಧ್ಯಕ್ಷ

ಪ್ರಾಧ್ಯಾಪಕ ದಸ್ತಗೀರಸಾಬ್ ದಿನ್ನಿ, ಹೊಸ ತಲೆಮಾರಿನವರು ಸರ್ಕಾರಿ ಹುದ್ದೆಯನ್ನು ನೆಚ್ಚಿಕೊಳ್ಳದೆ ತಾವು ಪಡೆದುಕೊಂಡ ಜ್ಞಾನವನ್ನು ಕೃಷಿಗೆ ಬಳಸಿಕೊಳ್ಳಬೇಕು. ಆ ಮೂಲಕ ಭಾರತದ ಕೃಷಿ ಎದುರಿಸುತ್ತಿರುವ ಬಿಕ್ಕಟ್ಟಿಗೆ ಪರಿಹಾರ ಹುಡುಕಬೇಕು ಎಂದು ಸಲಹೆ ನೀಡಿದರು.

ಪ್ರಾಸ್ತಾವಿಕ ಮಾತನಾಡಿದ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಹುಚ್ಚೂಸಾಬ್ ಸಂಡೂರು, ದೇಶದ ಬಹುಪಾಲು ರೈತರು ಮುಂಗಾರು ಮಳೆಯನ್ನು ಅವಲಂಬಿಸಿದ್ದಾರೆ. ಕೃಷಿವೆಚ್ಚ ಜಾಸ್ತಿಯಾಗಿ ಆದಾಯ ಕುಸಿಯುತ್ತಿದೆ. ಬಡ್ಡಿರಹಿತ ಸಾಲ ಸಿಗುತ್ತಿಲ್ಲ. ಅಮೆರಿಕ ಕೃಷಿ ವ್ಯಾಪಾರಿ ಧೋರಣೆ ರೈತರ ಹಿತಾಸಕ್ತಿಯನ್ನು ಕಾಪಾಡುತ್ತಿಲ್ಲ. ಇವೆಲ್ಲವುಗಳಿಂದ ಭಾರತದ ರೈತ ತಲ್ಲಣಕ್ಕೀಡಾಗಿದ್ದಾನೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಪ್ರಹ್ಲಾದ್ ಚೌದ್ರಿ ಮಾತನಾಡಿ, ಕಾಲಮಾನಕ್ಕೆ ಅನುಗುಣವಾಗಿ ರೈತರು ವಿಜ್ಞಾನ ಮತ್ತು ತಂತ್ರಜ್ಞಾನ ಬಳಸಿಕೊಳ್ಳಬೇಕಿದೆ. ರಾಸಾಯನಿಕ ವಸ್ತುಗಳನ್ನು ಕಡಿಮೆ ಬಳಸಿ ವಿಷಮುಕ್ತ ಆಹಾರ ಪದಾರ್ಥಗಳನ್ನು ಬೆಳೆದು ಭಾರತ ದೇಶದ ಪ್ರಗತಿಗೆಕೈಜೋಡಿಸಬೇಕಾದಅಗತ್ಯವಿದೆ. ಸರ್ಕಾರ ರೈತರ ಬೆಳೆಗೆ ಬೆಂಬಲ ಬೆಲೆಯನ್ನು ಒದಗಿಸಿ ಅವರಲ್ಲಿ ಆತ್ಮವಿಶ್ವಾಸ ಮೂಡಿಸಬೇಕಾದ ಅಗತ್ಯವಿದೆ ಎಂದರು.

ಪ್ರಾಧ್ಯಾಪಕ ಗಂಟೆಪ್ಪ ಶೆಟ್ಟಿ, ಅತಿಥಿ ಉಪನ್ಯಾಸಕರಾದ ಓಬಣ್ಣ, ಜಯಶೀಲ, ಅರ್ಜುನ್, ರೈತ ಮುಖಂಡರಾದ ಗಣೇಶ ಸ್ವಾಮಿ, ಓಂಕಾರಗೌಡ, ವಿಶ್ವನಾಥ್ ಉಪಸ್ಥಿತರಿದ್ದರು.

ಸುದ್ದಿ ಸಿಂಚನ

ಶರಣ ಸಂತರ ವಿಚಾರಧಾರೆ ಸಾರ್ವಕಾಲಿಕ: ಶ್ವೇತಾ



ಹೂವಿನಹಡಗಲಿ: ಶರಣ, ಸಂತರ ವಿಚಾರಧಾರೆಗಳು ಯಾವುದೇ ಒಂದು ಕಾಲಕ್ಕೆ ಮಾತ್ರ ಸೀಮಿತವಾಗಿಲ್ಲ. ಎಲ್ಲ ಕಾಲಗಳಲ್ಲಿಯೂ ಸಮಾಜಕ್ಕೆ ಮಾರ್ಗದರ್ಶನ ನೀಡುತ್ತವೆ ಎಂದು ಉಪನ್ಯಾಸಕಿ ಶ್ವೇತಾ ಬೀರಬ್ಬಿ ಹೇಳಿದರು. ಪಟ್ಟಣದ ಗವಿಸಿದ್ದೇಶ್ವರ ಮಠದಲ್ಲಿ ಆಯೋಜಿಸಿದ್ದ ಶಿವಾನುಭವ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡುತ್ತಾ, ಸಂತರ ಸಂದೇಶಗಳು ಮಾನವೀಯತೆ, ಸಮಾನತೆ, ಶಾಂತಿಯ ತತ್ವಗಳನ್ನು ಒಳಗೊಂಡಿವೆ. ಬಸವಣ್ಣ ಪ್ರತಿಪಾದಿಸಿದ ಕಾಯಕವೇ ಕೈಲಾಸ ತತ್ವ ಇಂದಿಗೂ ಪ್ರಸ್ತುತವಾಗಿದೆ. ಶ್ರಮದ ಗೌರವವನ್ನು ಎತ್ತಿ ಹಿಡಿಯುತ್ತದೆ ಎಂದರು. ಪತ್ರಕರ್ತ ಎಂ.ದಯಾನಂದ ಮಾತನಾಡಿದರು. ಪುರಸಭೆ ಮುಖ್ಯಾಧಿಕಾರಿ ಜಿ.ಹನುಮಂತಪ್ಪ ಕಾರ್ಯ ಕ್ರಮ ಉದ್ಘಾಟಿಸಿ ಮಾತನಾಡಿದರು.ಶ್ರೀಮಠದ ಡಾ.ಹಿರಿ ಶಾಂತವೀರ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು. ತಾಲೂಕ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಟಿ.ಎಂ.ನಾಗ ಭೂಷಣ, ಪತ್ರಕರ್ತ ನಾಗರಾಜ ಮಲ್ಕಿ ಒಡೆಯರ, ನಿವೃತ್ತ ಅಭಿಯಂತರ ಎಚ್.ಎಂ.ಶಶಿಧರಯ್ಯ, ತೇರಿನ ಮನಿ ಕಳಕರಡ್ಡಿ, ಜ್ಯೋತಿ ಪ್ರಕಾಶ, ಟಿ.ಗಂಗಮ್ಮ ಇದ್ದರು. ನಂತರ ಭಕ್ತಿಸೇವೆ ಗೈದ ಭಕ್ತರಿಗೆ ಗುರು ರಕ್ಷೆ ನೀಡಿಲಾಯಿತು. ಸೋಮಶೇಖರ ಬಳೆಗಾರ ಭಾವಗೀತೆ ಹಾಡಿದರು. ಹರ್ಷಾ, ದೇವಪ್ಪ ಒಂದಾಲಿ, ಎಚ್.ಬಿ.ರಾಜಣ್ಣ, ಎಚ್.ಎಂ.ಚನ್ನಬಸಯ್ಯ ನಿರೂಪಿಸಿದರು.

ಆರೋಗ್ಯ ತಪಾಸಣೆ ಶಿಬಿರ

ಸಂಡೂರು: ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಸ್ನಾತಕೋತ್ತರ ಕೇಂದ್ರ, ನಂದಿಹಳ್ಳಿಯ ಸಮಾಜ ಕಾರ್ಯ ಅಧ್ಯಯನ ವಿಭಾಗದಿಂದ ತಾಲೂಕಿನ ಜಿಗೇನಹಳ್ಳಿಯಲ್ಲಿ ಹಮ್ಮಿಕೊಂಡಿರುವ ಗ್ರಾಮೀಣ ಸಮಾಜ ಕಾರ್ಯ ಶಿಬಿರದ ಅಂಗವಾಗಿ ಮಂಗಳವಾರ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಯಿತು. ಸಂಡೂರು ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕೋಶ ಹಾಗೂ ಜಿಲ್ಲಾ ಸರ್ವೇಕ್ಷಣಾ ಘಟಕ ಬಳ್ಳಾರಿ ಸಹಯೋಗದಲ್ಲಿ ನಡೆದ ಶಿಬಿರದಲ್ಲಿ ಗ್ರಾಮದ 52 ಜನರು ಸಕ್ಕರೆ ಕಾಯಿಲೆ, ರಕ್ತದೊತ್ತಡ, ದಂತ ಸಮಸ್ಯೆಗಳ ತಪಾಸಣೆ ಹಾಗೂ ಪ್ರಾಥಮಿಕ ಚಿಕಿತ್ಸೆ ಪಡೆದುಕೊಂಡರು. ಶಿಬಿರದ ನೇತೃತ್ವವನ್ನು ಸಮಾಜ ಕಾರ್ಯ ಅಧ್ಯಯನ ವಿಭಾಗದ ಉಪನ್ಯಾಸಕರಾದ ಲಕ್ಷ್ಮಣ ತೋಳಿ, ಡಾ.ಹನುಮಂತ ಜಿ. ವಹಿಸಿದ್ದರು. ಸಾರ್ವಜನಿಕ ಆಸ್ಪತ್ರೆಯ ದಂತ ವೈದ್ಯೆ ಡಾ.ಕಲಾವತಿ, ಆಪ್ತ ಸಮಾಲೋಚಕ ಮರಿಗೌಡ, ನರ್ಸಿಂಗ್ ಸಿಬ್ಬಂದಿ ಆರೋಗ್ಯ ತಪಾಸಣೆ ನಡೆಸಿದರು.

ಭತ್ತದ ಚೀಲ ತುಂಬಿದ ಲಾರಿ ಪಲ್ಟಿ



ಸಿರುಗುಪ್ಪ: ತಾಲೂಕಿನ ತೆಕ್ಕಲಕೋಟೆ ಸಮೀಪ ರಾಷ್ಟ್ರೀಯ ಹೆದ್ದಾರಿ 150ಎರಲ್ಲಿ ಕಂಪ್ಲಿಯಿಂದ ಸಿರುಗುಪ್ಪಕ್ಕೆ 500 ಚೀಲ ಭತ್ತದ ಮೂಟೆಗಳನ್ನು ಹೊತ್ತು ತೆರಳುತ್ತಿದ್ದ ಲಾರಿಯು ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾದ ಪರಿಣಾಮ ಲಾರಿಯಲ್ಲಿದ್ದ ಬತ್ತದ ಚೀಲಗಳು ನೆಲಕ್ಕೆ ಬಿದ್ದಿವೆ.ಲಾರಿ ಪಲ್ಟಿಯಾಗುತ್ತಿದ್ದಂತೆಯೇ ಲಾರಿ ಚಾಲಕ, ಸಹಾಯಕ ಅಪಾಯದಿಂದ ಪಾರಾಗಿದ್ದಾರೆ. ಸ್ಥಳಕ್ಕೆ ತೆಕ್ಕಲಕೋಟೆ ಠಾಣೆ ಪೋಲಿಸರು ಬಂದು ಪರಿಶೀಲನೆ ನಡೆಸಿ ಮಾಹಿತಿ ಪಡೆದರು.

ಕೆಲಸಕ್ಕೆ ಗೈರು... | ಕೂಲಿ ಕಾರ್ಮಿಕರಿಗೆ ಮರದ ನೆರಳೇ ಆಸರೆ | ಬೆಳಗಿನ ಜಾವದಲ್ಲೇ ಕೆಲಸಕ್ಕೆ ಹಾಜರ್

ಬಿಸಿಲಿನ ಪ್ರಖರತೆ ಹೆಚ್ಚಳ: ನರೇಗಾಕ್ಕೆ ಕಾರ್ಮಿಕರ ಕೊರತೆ

File photo



• **ಚಂದ್ರು ಕೊಂಚಿಗೇರಿ**
ಕನ್ನಡಪ್ರಭ ವಾರ್ತೆ ಹೂವಿನಹಡಗಲಿ

ತಾಲೂಕಿನಲ್ಲಿ ಬಿಸಿಲಿನ ಪ್ರಖರತೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಬಿಸಿಲಿನ ತಾಪಮಾನಕ್ಕೆ ಹೆದರಿ ಕಾರ್ಮಿಕರು ನಿರೀಕ್ಷೆಗೆ ತಕ್ಕಷ್ಟು ಕೆಲಸಕ್ಕೆ ಬರುತ್ತಿಲ್ಲ. ಸದ್ಯ ತಾಲೂಕಿನಲ್ಲಿ 40 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದ್ದರೂ ನರೇಗಾ ಕೂಲಿ ಕಾರ್ಮಿಕರು ಭೀತಿಗೊಂಡು ಮನೆಯಲ್ಲಿ ಕುಳಿತುಕೊಳ್ಳದೇ ಬೆಳಗಿನ ಜಾವದಲ್ಲೇ ಕೆಲಸಕ್ಕೆ ಕಾರ್ಮಿಕರು ಹಾಜರಾಗುತ್ತಿದ್ದಾರೆ.

ಹೌದು, ತಾಲೂಕಿನ 26 ಗ್ರಾಪಂಗಳಲ್ಲಿ ಇಟ್ಟಿಗಿ, ಮೈಲಾರ, ನಂದಿಹಳ್ಳಿ ಗ್ರಾಪಂ ಹೊರತು ಪಡಿಸಿ ಉಳಿದೆಲ್ಲ ಕಡೆ ನಿತ್ಯ ನರೇಗಾ ಕಾಮಗಾರಿ ನಡೆಯುತ್ತಿದೆ. ಬೆಳಗಿನಜಾವ 6 ಗಂಟೆಗೆ ಕಾಮಗಾರಿ ನಡೆಯುವ ಜಾಗದಲ್ಲೇ ಕಾರ್ಮಿಕರು ಬಂದು ಫೇಸ್ ಐಡಿ ಹಾಜರಿ ನೀಡಿ ಕೆಲಸಕ್ಕೆ ಹಾಜರಾಗುತ್ತಾರೆ. 10ರಿಂದ 11 ಗಂಟೆ ಸುಮಾರಿಗೆ ಕೆಲಸ ಮುಗಿಸಿ ಮತ್ತೆ ಫೇಸ್ ಐಡಿ ಹಾಜರಿ ನೀಡುತ್ತಾರೆ.

2025ನೇ ಸಾಲಿನಲ್ಲಿ 404 ವಿವಿಧ ಕಾಮಗಾರಿಗಳು ಪೂರ್ಣಗೊಳ್ಳದೇ ಅರೆಬರೆಯಾಗಿದ್ದವು. ಕೆರೆ, ಕಾಲುವೆಗಳ ಹೂಳೆತ್ತುವ ಕಾಮಗಾರಿ, ನಾಲಾ ಪುನಶ್ಚೇತನ ಸೇರಿದಂತೆ ವಿವಿಧ ಕಾಮಗಾರಿಗಳಲ್ಲಿ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. 2.49 ಲಕ್ಷ ಮಾನವ ದಿನಗಳ ಸೃಜನೆಯಾಗಬೇಕಿದೆ. ಇದರಲ್ಲಿ ಈವರೆಗೂ 65,200 ಕಾರ್ಮಿಕರು ಮಾತ್ರ ಕೆಲಸಕ್ಕೆ ಬರುತ್ತಿದ್ದಾರೆ. ಜತೆಗೆ 23 ಗ್ರಾಪಂಗಳಲ್ಲಿ ಡೈನಾಮಿಕ್ ರಿಪೋರ್ಟ್ ಅನ್ವಯ 270 ಕಾಮಗಾರಿಗಳಿವೆ. ಇದಕ್ಕಾಗಿ 5,38,900 ಮಾನವ ದಿನಗಳ ಸೃಜನೆ ಮಾಡಬಹುದು. 7.88 ಲಕ್ಷ ಮಾನವ ದಿನಗಳ ಸೃಜನೆಗೆ ಅವಕಾಶ ಕಲ್ಪಿಸಲಾಗಿದೆ. ಆದರೆ ಗುರಿಗೆ ತಕ್ಕಂತೆ ನರೇಗಾ ಕೆಲಸಕ್ಕೆ ಕಾರ್ಮಿಕರ ಕೊರತೆ ಕಾಡುತ್ತಿದೆ.

> **ತಾಲೂಕಿನ 23 ಗ್ರಾಪಂಗಳಲ್ಲಿ ನರೇಗಾ ಯೋಜನೆಯಡಿ ಕಾಮಗಾರಿ ನಡೆಯುತ್ತಿದೆ. ಈವರೆಗೂ 6130 ಜನ ಫಾರಂ-6 ಪಡೆದಿದ್ದಾರೆ. ಆದರೆ 4119 ಜನ ಮಾತ್ರ ಕೆಲಸಕ್ಕೆ ಬಂದಿದ್ದು, ಉಳಿದಂತೆ 2011 ಕಾರ್ಮಿಕರು ವೈಯಕ್ತಿಕ ಕಾರಣದಿಂದ ಬಂದಿಲ್ಲ.**
>
> • **ವೀರಣ್ಣ ನಾಯ್ಕ** ಹೂವಿನಹಡಗಲಿ ತಾಪಂ ನರೇಗಾ ಯೋಜನೆ ಸಹಾಯಕ ನಿರ್ದೇಶಕ

> **ಬಿಲಿಸಿನ ತಾಪಕ್ಕೆ ಹೊರಗೆ ಬರಬೇಡಿ ಎಂದು ಅಧಿಕಾರಿಗಳು ಸಲಹೆ ನೀಡುತ್ತಾರೆ. ಆದರೆ ನಾವು ಬಿಸಿಲಿಗೆ ಬಂದು ಕೆಲಸ ಮಾಡದಿದ್ದರೆ ಹೊಟ್ಟೆಗೆ ತಣ್ಣೀರು ಬಟ್ಟೆಯೇ ಗತಿ. ನರೇಗಾ ಯೋಜನೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ರಿಯಾಯ್ತಿ ನೀಡಬೇಕು.**
>
> • **ಶಬ್ಬೀರ್‌ಬಾಷಾ** ಹೂವಿನಹಡಗಲಿ ಗ್ರಾಮೀಣ ಕೂಲಿ ಕಾರ್ಮಿಕರ ಸಂಘದ ಅಧ್ಯಕ್ಷ

ತುಂಗಭದ್ರಾ ನದಿ ತೀರದ ಹರವಿ, ಕುರುವತ್ತಿ, ಮೈಲಾರ, ಹೊಳಲು, ಬನ್ನಿಮಟ್ಟಿ, ಬ್ಯಾಲಹುಣ್ಸಿ, ಮಕರಬ್ಬಿ, ಅಂಗೂರು, ಮಾಗಳ, ಅಲ್ಲಿಪುರ, ನವಲಿ, ಹೊನ್ನೂರು, ರಾಜವಾಳ, ಕೊಂಬಳಿ, ಕಂದಗಲ್ಲು, ಸೋವೇನಹಳ್ಳಿ, ಹಕ್ಕಂಡಿ ಸೇರಿ ಇತರೆ ಭಾಗಗಳಲ್ಲಿ ಭತ್ತದ ಕಟಾವು ನಡೆಯುತ್ತಿದೆ. ರೈತರ ಕೆಲಸಕ್ಕೆ ಅಡ್ಡಿಯಾಗುತ್ತಿದೆ. ಇದರಿಂದ ನರೇಗಾ ಕೆಲಸಕ್ಕೆ ಕಾರ್ಮಿಕರು ಹೋಗುತ್ತಿಲ್ಲ ಎಂಬುದು ಒಂದು ಕಾರಣವಾದರೆ, ಉಳಿದ ಕಡೆ ಬಿಸಿಲಿನ ಪ್ರಖರತೆಗೆ ಹೆದರಿ ಕೆಲಸಕ್ಕೆ ಬರುತ್ತಿಲ್ಲವೆಂಬ ಮಾತುಗಳು ಕೇಳಿ ಬರುತ್ತಿವೆ. ತಾಲೂಕಿನ 23 ಗ್ರಾಪಂಗಳ ವ್ಯಾಪ್ತಿಯಲ್ಲಿ 6130 ಕಾರ್ಮಿಕರು ಕೆಲಸಕ್ಕೆ ಅರ್ಜಿ ಸಲ್ಲಿಸಿ ಫಾರಂ-6 ಪಡೆದಿದ್ದಾರೆ. ಇದರಲ್ಲಿ 4119 ಜನ ಕೆಲಸಕ್ಕೆ ಬಂದಿದ್ದು, 2011 ಕಾರ್ಮಿಕರು ಕೆಲಸಕ್ಕೆ ಗೈರಾಗಿದ್ದಾರೆ.

ಕಲ್ಯಾಣ ಕರ್ನಾಟಕ ಪ್ರದೇಶದ ವ್ಯಾಪ್ತಿಯ ಜಿಲ್ಲೆಯಲ್ಲಿ ಬಿಸಿಲಿನ ಪ್ರಖರತೆ ಹೆಚ್ಚಾಗಿರುವ ಕಾರಣ ಸರ್ಕಾರಿ ಕಚೇರಿಗಳಿಗೆ ಬೆಳಿಗ್ಗೆ 8 ಗಂಟೆಯಿಂದ 1.30ರವರೆಗೂ ಕರ್ತವ್ಯ ನಿರ್ವಹಿಸುವಂತೆ ಸರ್ಕಾರ ಆದೇಶಿಸಿದೆ. ಆದರೆ ನರೇಗಾ ಯೋಜನೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ರಿಯಾಯ್ತಿ ನೀಡದಿರುವುದು ಎಷ್ಟು ಸರಿ ಎಂದು ಕಾರ್ಮಿಕರು ಪ್ರಶ್ನಿಸುತ್ತಿದ್ದಾರೆ.

ವಸತಿ ರಹಿತರ ಪಟ್ಟಿಗೆ ಹೆಸರು ಸೇರಿಸಲು ಮೇ 15 ಕೊನೆಯ ದಿನ

• **ಕನ್ನಡಪ್ರಭ ವಾರ್ತೆ** ಹೊಸಪೇಟೆ


ಜಿಲ್ಲೆಯ ವಸತಿ ರಹಿತ ಹಾಗೂ ನಿವೇಶನ ರಹಿತ ಅರ್ಹ ಫಲಾನುಭವಿಗಳು ಸರ್ಕಾರದ ವಿವಿಧ ವಸತಿ ಯೋಜನೆಗಳ ಲಾಭ ಪಡೆಯಲು ಮೇ 15ರೊಳಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ ತಿಳಿಸಿದ್ದಾರೆ.

2018ರ ಸಮೀಕ್ಷಾ ಪಟ್ಟಿಯಲ್ಲಿರುವ ಅನರ್ಹರನ್ನು ಕೈಬಿಟ್ಟು, ಬಿಟ್ಟುಹೋಗಿರುವ ಅರ್ಹ ಫಲಾನುಭವಿಗಳನ್ನು ಸೇರಿಸಲು ಅವಕಾಶ ನೀಡಿದೆ. 2026-27ನೇ ಸಾಲಿನ ಆಯವ್ಯಯದಲ್ಲಿ ರಾಜ್ಯಾದ್ಯಂತ ಬಿಎಲ್‌ಸಿ ಆಧಾರಿತ 1 ಲಕ್ಷ ಹೊಸ ಮನೆಗಳ ಗುರಿ ಹಂಚಿಕೆಯಾಗಿದ್ದು, ಆನ್‌ಲೈನ್ ಲಾಟರಿ ಮೂಲಕ ಗ್ರಾಮ ಸಭೆಗಳಲ್ಲಿ ಫಲಾನುಭವಿಗಳ ಆಯ್ಕೆ ನಡೆಯಲಿದೆ. ಆದ್ದರಿಂದ ಅರ್ಹ ವಸತಿ ರಹಿತರ ಹೆಸರನ್ನು ಪಟ್ಟಿಗೆ ಸೇರಿಸಲು ಇದೇ ಮೇ 15 ಕೊನೆಯ ದಿನವಾಗಿದೆ. ನಂತರ ಪಟ್ಟಿಯನ್ನು ಸ್ಥಗಿತಗೊಳಿಸಲಾಗುವುದು. ಯಾವುದೇಅರ್ಹಫಲಾನುಭವಿಗಳುಪಟ್ಟಿಯಿಂದಹೊರಗುಳಿಯದಂತೆನೋಡಿಕೊಳ್ಳುವ ಜವಾಬ್ದಾರಿಯನ್ನು ಆಯಾ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ಪಿಡಿಒ) ವಹಿಸಲಾಗಿದೆ.

ಒಂದು ವೇಳೆ ಅರ್ಹರನ್ನು ಕೈಬಿಟ್ಟಿರುವುದು ಕಂಡುಬಂದಲ್ಲಿ ಪಿಡಿಒಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಿಇಒ ಎಚ್ಚರಿಸಿದ್ದಾರೆ.ಈ ನಿಟ್ಟಿನಲ್ಲಿ ಈ ಪ್ರಕ್ರಿಯೆಯನ್ನು ಕಾಲಮಿತಿಯೊಳಗೆ ಅತ್ಯಂತ ತುರ್ತಾಗಿ ಮತ್ತು ಆಂದೋಲನದ ಮಾದರಿಯಲ್ಲಿ ಯಶಸ್ವಿಗೊಳಿಸಲು ಜಿಲ್ಲೆಯ ಎಲ್ಲ ತಾಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ವಸತಿ ರಹಿತ ಸಾರ್ವಜನಿಕರು ತಕ್ಷಣವೇ ತಮ್ಮ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಿ ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ ತಿಳಿಸಿದ್ದಾರೆ.

ಫಸಲ್ ಬಿಮಾ ಯೋಜನೆಯಲ್ಲಿ ಭಾರಿ ಅಕ್ರಮ; ತನಿಖೆಗೆ ಒತ್ತಾಯ

ಹಾರಕನಾಳು ಗ್ರಾಪಂ ವ್ಯಾಪ್ತಿ ನಡೆದಿದೆ ಭಾರಿ ಅಕ್ರಮ: ರೈತರ ಆರೋಪ



ಹಾರಕನಾಳು ಭಾಗದ ರೈತ ಮುಖಂಡರು ವಿಜಯನಗರ ಜಿಲ್ಲಾ ಕೃಷಿ ಜಂಟಿ ನಿರ್ದೇಶಕ ಮಂಜುನಾಥ ಅವರಿಗೆ ಮನವಿ ಸಲ್ಲಿಸಿದರು.

- ಬೆಳೆ ಕಟಾವು ಪ್ರಯೋಗ ಪ್ರಕ್ರಿಯೆಯಲ್ಲಿ ಒಣ ಬೇಸಾಯ, ನೀರಾವರಿ ಭೂಮಿಯ ನಡುವೆ ಉದ್ದೇಶಪೂರ್ವಕವಾಗಿ ತಾರತಮ್ಯ ಮಾಡಲಾಗಿದೆ.
- ನೀರಾವರಿ ಜಮೀನಿನ ಸಿಸಿ ಕಟಿಂಗ್ ಅನ್ನು ಬೆದ್ದಲು ಭೂಮಿಗೆ ಸೇರಿಸಿ ದಾಖಲೆ ತಿರುಚಲಾಗಿದೆ.
- ರೈತರ ಮೊಬೈಲ್‌ಗೆ ಒಟಿಪಿ ಬಂದ ನಂತರವಷ್ಟೇ ಸಿಸಿ ಕಟಿಂಗ್ ಪ್ರಕ್ರಿಯೆ ನಡೆಸಬೇಕು.

• **ಕನ್ನಡಪ್ರಭ ವಾರ್ತೆ** ಹರಪನಹಳ್ಳಿ

ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಅಡಿ ತಾಲೂಕಿನ ಹಾರಕನಾಳು ಗ್ರಾಪಂ ವ್ಯಾಪ್ತಿ ಭಾರಿ ಅಕ್ರಮ ನಡೆದಿದೆ. ಸಮರ್ಪಕ ತನಿಖೆ ನಡೆಸಿ ರೈತರಿಗೆ ನ್ಯಾಯ ಒದಗಿಸುವಂತೆ ಒತ್ತಾಯಿಸಿ ಹಾರಕನಾಳು ಭಾಗದ ರೈತ ಮುಖಂಡರು ವಿಜಯನಗರ ಜಿಲ್ಲಾ ಕೃಷಿ ಇಲಾಖೆಯಜಂಟಿನಿರ್ದೇಶಕಮಂಜುನಾಥಗೆ ಗುರುವಾರ ಹರಪನಹಳ್ಳಿಯಲ್ಲಿ ಮನವಿ ಸಲ್ಲಿಸಿದರು.ಬೆಳೆ ವಿಮೆಗೆ ಸಂಬಂಧಪಟ್ಟಂತೆ ಸ್ಥಳೀಯ ಅಧಿಕಾರಿಗಳು ನಿಷ್ಪಕ್ಷಪಾತ, ನ್ಯಾಯಯುತವಾಗಿ ಕೆಲಸ ನಿರ್ವಹಿಸಿಲ್ಲ. ಬದಲಾಗಿ ಫಸಲ್ ಬಿಮಾ ಯೋಜನೆಯಲ್ಲಿ ಅಕ್ರಮಕ್ಕೆ ಕುಮ್ಮಕ್ಕು ನೀಡಿದ್ದಾರೆ ಎಂದು ರೈತರು ಗಂಭೀರ ಆರೋಪ ಮಾಡಿದರು.

ಬೆಳೆ ಕಟಾವು ಪ್ರಯೋಗ ಪ್ರಕ್ರಿಯೆಯಲ್ಲಿ ಒಣ ಬೇಸಾಯ (ಬೆದ್ದಲು), ನೀರಾವರಿ ಭೂಮಿಯ ನಡುವೆ ಉದ್ದೇಶಪೂರ್ವಕವಾಗಿ ತಾರತಮ್ಯ ಮಾಡಲಾಗಿದೆ. ನೀರಾವರಿ ಜಮೀನಿನ ಸಿಸಿ ಕಟಿಂಗ್ ಅನ್ನು ಬೆದ್ದಲು ಭೂಮಿಗೆ ಸೇರಿಸಿ ದಾಖಲೆ ತಿರುಚಲಾಗಿದೆ. ವಿಮಾ ಕಂಪನಿಯ ನಿಯಮಾವಳಿಗಳ ಪ್ರಕಾರ ರೈತರ ಮೊಬೈಲ್‌ಗೆ ಒಟಿಪಿ ಬಂದ ನಂತರವಷ್ಟೇ ಸಿಸಿ ಕಟಿಂಗ್ ಪ್ರಕ್ರಿಯೆ ನಡೆಸಬೇಕು. ಆದರೆ, ಇಲ್ಲಿ ಒಟಿಪಿ ಬಾರದಿದ್ದರೂ ಕಟಾವು ಪ್ರಕ್ರಿಯೆ ತೋರಿಸಿ ಏಕಪಕ್ಷೀಯವಾಗಿ ಮುಕ್ತಾಯಗೊಳಿಸಲಾಗಿದೆ. ಇದು ಸಂಪೂರ್ಣ ಅವೈಜ್ಞಾನಿಕವಾಗಿದೆ ಎಂದು ದೂರಿದರು. ತಂತ್ರಜ್ಞಾನ ದುರ್ಬಳಕೆ ಮಾಡಿಕೊಂಡು ಅವೈಜ್ಞಾನಿಕ ವರದಿ ಸಲ್ಲಿಸಿರುವ ಅಧಿಕಾರಿ ಗಳನ್ನು ಕೂಡಲೇ ಅಮಾನತು ಮಾಡಬೇಕು. ಹೊಸ ಸಮಿತಿ ರಚಿಸಿ, ಪುನಃ ಮರುಪರಿಶೀಲನೆ ನಡೆಸಿ ರೈತರಿಗೆ ನ್ಯಾಯ ದೊರಕಿಸಿ ಕೊಡಬೇಕು ಎಂದು ಎಲ್.ಬಿ.ಹಾಲೇಶ ನಾಯ್ಕ, ಎಚ್.ಎಂ.ಬಸವರಾಜಯ್ಯ, ಬಾಷುಸಾಬ್, ಪುಟ್ಟ ನಾಯ್ಕ್, ಮಲ್ಲನಾಯ್ಕ ಹಾಲೇಶ, ಹರೀಶ್ಚಂದ್ರ, ಮಂಜನಾಥ ನಾಯ್ಕ್ ಆಗ್ರಹಿಸಿದ್ದಾರೆ.

ರೈತರು ಸಂಘಟಿತರಾಗಲಿ: ವೀರಸಂಗಯ್ಯ

• **ಕನ್ನಡಪ್ರಭ ವಾರ್ತೆ** ಹೂವಿನಹಡಗಲಿ



ಕಗ್ಗಲಗಟ್ಟಿ ತಾಂಡದಲ್ಲಿ ರಾಜ್ಯ ರೈತ ಸಂಘದ ನೂತನ ಗ್ರಾಮ ಘಟಕ ಉದ್ಘಾಟಿಸಲಾಯಿತು.

ರೈತರ ಸಮಸ್ಯೆಗಳ ಕುರಿತು ಹೋರಾಟ ಹಮ್ಮಿಕೊಳ್ಳಲು ಎಲ್ಲ ಕಡೆಗಳಿಂದ ಕೃಷಿಕರು ಸಂಘಟಿತರಾಗುವ ಅಗತ್ಯವಿದೆ ಎಂದು ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಜೆ.ಎಂ. ವೀರಸಂಗಯ್ಯ ಹೇಳಿದರು.

ತಾಲೂಕಿನ ಕಗ್ಗಲಗಟ್ಟಿ ತಾಂಡದಲ್ಲಿ ರಾಜ್ಯ ರೈತ ಸಂಘದ ನೂತನ ಗ್ರಾಮ ಘಟಕ ಉದ್ಘಾಟಿಸಿ ಮಾತನಾಡಿದ ಅವರು, ಬೆಳೆ ಪರಿಹಾರ, ಬೆಂಬಲ ಬೆಲೆ, ರಸಗೊಬ್ಬರ ಬೆಲೆ ಏರಿಕೆ ಸೇರಿ ಇನ್ನಿತರ ಸಮಸ್ಯೆಗಳ ಕುರಿತು ಸರ್ಕಾರದ ವಿರುದ್ಧ ಧ್ವನಿ ಎತ್ತಲು, ಎಲ್ಲರೂ ಸಿದ್ಧರಾಗಬೇಕಿದೆ. ರೈತರು ತಮ್ಮ ಹಕ್ಕುಗಳ ಬಗ್ಗೆ ಅರಿವು ಹೊಂದಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘದ ಮಹಿಳಾ ಜಿಲ್ಲಾಧ್ಯಕ್ಷೆ ಬಿ.ಎಚ್.ಎಂ. ವಿಜಯಲಕ್ಷ್ಮಿ, ತಾಲೂಕು ಅಧ್ಯಕ್ಷ ಎಚ್. ಸಿದ್ದಪ್ಪ, ಜಿಲ್ಲಾ ಯುವ ಘಟಕದ ಅಧ್ಯಕ್ಷ ಟಿ.ರವಿಕುಮಾರ, ತಾಲೂಕು ಪ್ರಧಾನ ಕಾರ್ಯದರ್ಶಿ ಶಿವರಾಜ ಹೊಳಗುಂದಿ, ಬಾಲಾಜಿನಾಯ್ಕ, ಜಿಲ್ಲಾ ಉಪಾಧ್ಯಕ್ಷ ಗನಿ ಸಾಹೇಬ್, ಕೆ.ಮಂಜುನಾಥ್, ಜಿಲ್ಲಾ ಕಾರ್ಯದರ್ಶಿ ದುರುಗಪ್ಪ, ತಾಲೂಕ ಗೌರವ ಅಧ್ಯಕ್ಷ ಪಕ್ಕೀರಪ್ಪ, ವಿಠಲ ನಾಯ್ಕ, ವಿ.ಬಿ.ಚನ್ನಬಸಪ್ಪ, ಮಂಜುನಾಥ ಢಾಕ್ಯಾ ನಾಯ್ಕ, ಭೋಜಾನಾಯ್ಕ, ನಾಗಪ್ಪ ಸೇರಿದಂತೆ ಇತರರಿದ್ದರು.

ಪದಾಧಿಕಾರಿಗಳ ಆಯ್ಕೆ: ಗ್ರಾಮ ಘಟಕದ ಗೌರವಾಧ್ಯಕ್ಷ ಎಂ.ದುರ್ಗ್ಯಾನಾಯ್ಕ, ಅಧ್ಯಕ್ಷ ಆರ್.ಚಂದ್ರಶೇಖರ ನಾಯ್ಕ, ಉಪಾಧ್ಯಕ್ಷ ಎಂ.ಖುಬ್ಯಾನಾಯ್ಕ, ಖಜಾಂಚಿ ಎಂ ಚಂದ್ರನಾಯ್ಕ, ಪ್ರಧಾನ ಕಾರ್ಯದರ್ಶಿ ಎ.ಯಂಕಾನಾಯ್ಕ, ಸಂಘಟನಾ ಕಾರ್ಯದರ್ಶಿ ವಿ.ವಿಷ್ಯನಾಯ್ಕ, ಜಂಟಿ ಕಾರ್ಯದರ್ಶಿ ರಾಜುನಾಯ್ಕ, ಸಹ ಸಂಚಾಲಕ ಆರ್‌ಮಲ್ಲನಾಯ್ಕ ಅವರನ್ನು ಆಯ್ಕೆ ಮಾಡಲಾಯಿತು.

ಲಂಚ ಸ್ವೀಕಾರ: ಸರ್ವೇಯರ್ ಲೋಕಾಯುಕ್ತ ಬಲೆಗೆ

• **ಕನ್ನಡಪ್ರಭ ವಾರ್ತೆ** ಹರಪನಹಳ್ಳಿ

ಭೂಮಿ ಹದ್ದುಬಸ್ತು ಮಾಡಿಕೊಡಲು ಲಂಚ ಸ್ವೀಕರಿಸುತ್ತಿದ್ದಾಗ ಸರ್ವೇಯರ್ ಒಬ್ಬರು ಲೋಕಾಯುಕ್ತ ಬಲೆಗೆ ಬಿದ್ದ ಘಟನೆ ಹರಪನಹಳ್ಳಿ ತಾಲೂಕಿನ ನಂದಿಬೇವೂರು ತಾಂಡಾದಲ್ಲಿ ಗುರುವಾರ ನಡೆದಿದೆ.

ಹಗರಿಬೊಮ್ಮನಹಳ್ಳಿ ಭೂಮಾಪನಾ ಇಲಾಖೆಯಲ್ಲಿ ಸರ್ವೇಯರ್ ಆಗಿ ಕಾರ್ಯ ನಿರ್ವಹಿಸುತ್ತಿರುವ ಕೊಟ್ರೇಶ ನಾಯ್ಕ ಎಂಬಾತನೇ ಲೋಕಾಯುಕ್ತಕ್ಕೆ ಸಿಕ್ಕು ಬಿದ್ದಿರುವುದು. ಹಗರಿಬೊಮ್ಮನಹಳ್ಳಿ ತಾಲೂಕಿನ ವರದಾಪುರ ಗ್ರಾಮದ ದೇವೇಂದ್ರ ಎಂಬವರು ತಮ್ಮ ಹೊಲದ ಹದ್ದುಬಸ್ತಿಗಾಗಿ ಭೂಮಾಪನಾ ಇಲಾಖೆಗೆ ಅರ್ಜಿ ಸಲ್ಲಿಸಿದ್ದರು. ಸರ್ವೆಯರ್ ಕೊಟ್ರೇಶ ನಾಯ್ಕ ಎಂಬವರಿಗೆ ಹದ್ದು ಬಸ್ತು ಮಾಡಲು ನಿಗದಿ ಮಾಡಲಾಗಿತ್ತು. ಸರ್ವೆಯರ್ ಕೊಟ್ರೇಶ ನಾಯ್ಕ ಬೇರೆ ಬೇರೆ ಕಾರಣ ಹೇಳಿ 2024ರಿಂದ ಇಲ್ಲಿವರೆಗೂ ಸತಾಯಿಸಿ ಲಂಚಕ್ಕೆ ಬೇಡಿಕೆ ಇಟ್ಟು ಮೊದಲಿಗೆ ₹10 ಸಾವಿರ ಪಡೆದು, ಪುನಃ ₹30 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟು ಲಂಚ ಸ್ವೀಕರಿಸಿ ಸಿಕ್ಕಿಬಿದ್ದಿದ್ದಾರೆ.

ಕೊಟ್ರೇಶ ನಾಯ್ಕ ಅವರನ್ನು ಹರಪನಹಳ್ಳಿ ತಾಲೂಕಿನ ನಂದಿಬೇವೂರು ತಾಂಡದಲ್ಲಿ ಲೋಕಾಯುಕ್ತ ಪೊಲೀಸರು ಗುರುವಾರ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಬಿಎಸ್‌ವೈ ಕಾರ್ಯಕ್ರಮಕ್ಕೆ 12ಕ್ಕೂ ಹೆಚ್ಚು ಬಸ್ ಬಳಕೆ

ಕೊಟ್ಟೂರು: ಮೇ 9ಕ್ಕೆ ಚಿತ್ರದುರ್ಗದಲ್ಲಿ ನಡೆಯಲಿರುವ ಬಿಎಸ್‌ವೈ ಅಭಿಮಾನೋತ್ಸವಕ್ಕೆ ಕೊಟ್ಟೂರು ತಾಲೂಕಿನಿಂದ 12ಕ್ಕೂ ಹೆಚ್ಚು ಬಸ್ ತೆರಳಲಿವೆ ಎಂದು ಪಟ್ಟಣಬಿಜೆಪಿಘಟಕಾಧ್ಯಕ್ಷಪಂಪಾಪತಿ ಅಂಗಡಿ ಹೇಳಿದರು.ಈ ಸಂಬಂಧ ಮಾಹಿತಿ ನೀಡಿದ ಅವರು, ಎಲ್ಲ ಬಗೆಯತಯಾರಿಮಾಡಿಕೊಂಡಿರುವುದಾಗಿ ಅವರು ಹೇಳಿದರು.